ವಿಜಯಪುರ | ಸಂಪುಟ 04 | ಸಂಚಿಕೆ 113 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಜೂನ್, 24, 2026

"ಮಾದಕ ವ್ಯಸನವು ಯುವಶಕ್ತಿಯ ಮೇಲೆ ಮಾತ್ರವಲ್ಲ, ದೇಶದ ಆರ್ಥಿಕತೆ ಹಾಗೂ ಸಾಮಾಜಿಕ ವ್ಯವಸ್ಥೆಯ ಮೇಲೆಯೂ ದುಷ್ಪರಿಣಾಮ ಬೀರುತ್ತದೆ. ಯುವಕರು ವ್ಯಸನದ ದಾಸರಾಗದೆ ಆತ್ಮವಿಶ್ವಾಸ, ಮತ್ತು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು."



■ ಲಕ್ಷ್ಮಣ ನಿಂಬರಗಿ
ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

# ಜನ-ಜಾನುವಾರುಗಳಿಗೆ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಿ

## ವಿಜಯಪುರ ಜಿಪಂನಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ | ಸಚಿವ ಡಾ.ಎಂ.ಬಿ. ಪಾಟೀಲ ಅಧಿಕಾರಿಗಳಿಗೆ ಕಟ್ಟಪ್ಪಣೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜುಲೈ 2ನೇ ವಾರದಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಆದಾಗ್ಯೂ ಮಳೆ ಅಭಾವದಿಂದ ಜಿಲ್ಲೆಯಾದ್ಯಂತ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಜವಾಬ್ದಾರಿ ಅರಿತು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ.ಬಿ. ಪಾಟೀಲ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

### ಲೋಣಿ ಕೆಬಿ ಹಾಗೂ ಬಳಗಾನೂರ ಕೆರೆ ತುಂಬಿವೆ



ವಿಜಯಪುರ ನಗರದಲ್ಲಿ ಭೂತನಾಳ ಕೆರೆಯಿಂದ ಐದು ವಾರ್ಡಗೆ ನೀರಿನ ತಾಪತ್ರಯವಿಲ್ಲ. ತಾಜಬಾವಡಿ ಪುನಶ್ಚೇತನಗೊಳಿಸಿದ್ದು ನೀರಿನ ಸದ್ಬಳಕೆಯಾಗಬೇಕು. ತಾಜಬಾವಡಿಗೆ ಯುಜಿಡಿ ನೀರು ಸೇರ್ಪಡೆಯಾಗದಂತೆ ಯೋಜನೆ ಸಿದ್ಧಪಡಿಸಿಕೊಂಡು ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಆನಂದ ಕೆ. ಅವರು ಸಚಿವರಿಗೆ ವಿವರಣೆ ನೀಡಿದರು

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆ ಸೇರಿದಂತೆ ಗ್ರಾಮೀಣ, ನಗರ, ಸ್ಥಳೀಯ ಸಂಸ್ಥೆ ಹಾಗೂ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಆಯಾ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ವಿದ್ಯುತ್ ಪರಿವರ್ತಕಗಳ ಸಮಸ್ಯೆಯಿದ್ದಲ್ಲಿ ಸ್ಪೀಡ್ ಅಪ್ ಮಾಡಿ ಕುಡಿಯುವ ನೀರಿಗೆ ತಕ್ಷಣಕ್ಕೆ ವಿದ್ಯುತ್ ಪೂರೈಕೆಯಾಗುವಂತೆ ಹೆಸ್ಕಾಂ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಖಾಸಗಿ ಬೋರ್ ವೆಲ್ ಗುರುತಿಸಿ: ಎಲ್ಲೆಲ್ಲಿ ನೀರಿನ ಸಮಸ್ಯೆ ಉಲ್ಬಣವಾಗಬಹುದೋ, ಮುಂಚಿತವಾಗಿ ಮಾಹಿತಿ ಪಡೆದುಕೊಂಡು ಅಂತಹ ಸ್ಥಳದಲ್ಲಿ ಅಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಅದಕ್ಕೆಂದೇ ಖಾಸಗಿ ಬೋರವೆಲ್ ಗಳನ್ನು ಗುರುತಿಸಿ, ಅತಿ ಅವಶ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮ ವಹಿಸಬೇಕು ಎಂದರಲ್ಲದೆ, ಮಳೆ ಬರುವವರೆಗೆ ಮುಂಚಿತವಾಗಿ ಯೋಜನೆ ರೂಪಿಸಿಕೊಂಡು ಕಾರ್ಯನಿರ್ವಹಿಸಬೇಕು ಎಂದರು. ಸಭೆಯಲ್ಲಿ ನಾಗಠಾಣ ಶಾಸಕರಾದ ವಿಠ್ಠಲ ಕಟಕದೊಂಡ, ದೇವರ ಹಿಪ್ಪರಗಿ ಶಾಸಕರಾದ ರಾಜುಗೌಡ ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಗಂಗಾಧರ ಸಂಬಣ್ಣಿ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ., ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಕಾಧಿಕಾರಿಗಳಾದ ರಿಷಿ ಆನಂದ, ಎಸ್‌ಪಿ ಲಕ್ಷ್ಮಣ ನಿಂಬರಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತ–ರಿದ್ದರು.

## ಮಳೆ ಅಭಾವ, ಸಮಸ್ಯೆ ಎದುರಿಸಲು ಸಜ್ಜಾಗಿ



ಜಿಲ್ಲೆಯಲ್ಲಿ ಈ ವರ್ಷ ಮಳೆ ಕಡಿಮೆಯಾಗಿರುವುದರಿಂದ ಮುಂದೆ ಉಲ್ಬಣಿಸಬಹುದಾದ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ.ಬಿ. ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾಗಿ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನಜಾನುವಾರುಗಳಿಗೆ ಕುಡಿಯುವ ನೀರು, ಬಿತ್ತನೆ ಬೀಜ, ರಸಗೊಬ್ಬರ ಮೇವು ಎಲ್ಲ ವಿಚಾರ ಬಗ್ಗೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿದ್ದು, ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾಗಿ ಸಚಿವರು ತಿಳಿಸಿದರು.

ಜುಲೈಎರಡನೇವಾರಮಳೆಬರಬಹುದೆಂದು ಹವಾಮಾನ ಇಲಾಖೆ ಹೇಳಿದೆ. ಕುಡಿಯುವ ನೀರಿನ ಸಮಸ್ಯೆಯಾದ ಸಂದರ್ಭದಲ್ಲಿ ಆದ–ಾಗ್ಯೂ ಬೋರ್ ವೆಲ್ ಕೊರೆಯಿಸಿ, ವಿದ್ಯುತ್ ಅಳವಡಿಸಿ ನೀರು ಪೂರೈಸಲು ಸಮಯ ಬೇಕಾಗುತ್ತದೆ. ಆದರೆ, ಖಾಸಗಿ ಬೋರ್ ವೆಲ್ ಗಳನ್ನು ಗುರುತಿಸಿಕೊಟ್ಟುಕೊಳ್ಳಲು ಸೂಚಿಸಿದ್ದಾಗಿ ಸಚಿವರು ತಿಳಿಸಿದರು.

ತಾಜ್ ಬಾವಡಿ ನೀರನ್ನು ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳಲು ಸೂಚಿಸಲಾಗಿದೆ. ಗ್ರಾಪಂ ಮಟ್ಟದಲ್ಲಿ ಅನಿವಾರ್ಯ ಸಂದರ್ಭದಲ್ಲಿ ಖಾಸಗಿ ಬೋರವೆಲ್ ಗಳಿಂದ ಟ್ಯಾಂಕರ್ ಮೂಲಕ ನೀರು ಪೂರೈಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದೂ ಸೂಚಿಸಿದ್ದಾಗಿ ಸಚಿವರು ತಿಳಿಸಿದರು.

### ನಿರ್ಲಕ್ಷ್ಯ ವಹಿಸಿದರೆ ಕ್ರಮ



ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅಧಿಕಾರಿಗಳು ಸಮನ್ವಯತೆಯಿಂದ ಗಂಭೀರವಾಗಿ ಕಾರ್ಯನಿರ್ವಹಿಸಬೇಕು. ನಿರ್ಲಕ್ಷ್ಯ ವಹಿಸಿದರೆ ಮುಲಾಜಿಲ್ಲದೇ ಕ್ರಮ ಜರುಗಿಸಲಾಗುವುದು. ಇನ್ನೊಂದೆಡೆ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು, ಮೊಬೈಲ್ ಆನ್ ಇಟ್ಟುಕೊಂಡೇ ಅತ್ಯಂತ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದರು.

ಮಳೆಯಾಗಿ ಒಳಹರಿವು ಹೆಚ್ಚಳವಾಗುವವರೆಗೆ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕುಡಿಯುವ ಉದ್ದೇಶಕ್ಕಾಗಿ ನೀರನ್ನು ಕಾಯ್ದಿರಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದ ಸಚಿವರು ಕುಡಿಯುವ ನೀರಿಗೆ ಆದ್ಯತೆಯಾಗಿಸಿಕೊಂಡು ಅತಿ ಜಾಗೃತೆಯಿಂದ ಕಾರ್ಯ ನಿರ್ವಹಿಸಬೇಕು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಜೂ.25 ರಂದು ವಿವಿಧ ಕಾಮಗಾರಿಗಳ ಭೂಮಿ ಪೂಜೆ : ಸುಂಬಡ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ನೂತನ ತಾಲೂಕಿನ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡಿದ ಶಾಸಕ ಅಶೋಕ ಮನುಗುಳಿ ಅವರ ಅವಧಿಯಲ್ಲಿ ಪ್ರಾರಂಭಗೊಂಡ ಕಾಮಗಾರಿಗಳು ಅವರ ಅವಧಿಯಲ್ಲಿ ಉದ್ಘಾಟನೆಗೊಳ್ಳಲಿವೆ ಎಂದು ಪಟ್ಟಣ ಪಂಚಾಯತ್ ಅಧ್ಯಕ್ಷ ಸಾಧಿಕ ಸುಂಬಡ ಹೇಳಿದರು. ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುತ್ತಾ ಹೇಳಿದರು.

ಜೂ.25 ರಂದು ವಿವಿಧ ಕಾಮಗಾರಿಗಳ ಭೂಮಿ ಪೂಜೆ ಹಾಗೂ ಉದ್ಘಾಟನೆ ಮಾಡಲು ಆಗಮಿಸುತ್ತಿರುವ ಸಚಿವರುಗಳು ಅಭಿವೃದ್ಧಿ ಕೆಲಸಗಳನ್ನು ವೀಕ್ಷಿಸಲಿದ್ದಾರೆ. ಎಲ್ಲಾ ಕಾರ್ಯಕ್ರಮಗಳು ಪಟ್ಟಣದಲ್ಲಿ ಜರುಗಲಿದ್ದು ಪಟ್ಟಣದ ಜನರು ಸೇರಿದಂತೆ ತಾಲೂಕಿನ ವಿವಿಧ ಗ್ರಾಮದ ಜನರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

ಪಟ್ಟಣದಲ್ಲಿ 20 ಕೋಟಿ ವೆಚ್ಚದಲ್ಲಿ ಸದಾಶಿವ ಗೌಡ ರಾಜ್ಯ ಮುಖ್ಯ ರಸ್ತೆ ಅಗಲೀಕರಣದಲಿ, ದಂಬರಿಕಾರಣ, ವಿದ್ಯುತ್ ವ್ಯವಸ್ಥೆ ನಿರ್ಮಾಣ–ಕೆ ಅನೇಕ ಬಡ ಜನರ ಮನೆಗಳು ಅಂಗಡಿಗಳು ದೇವಸ್ಥಾನ ಸ್ಮಶಾನ ಜಾಗವನ್ನು ಸ್ವಯಂ ಪ್ರೇರಿತವಾಗಿ ತೆರವುಗೊಳಿಸಿ ಅಭಿವೃದ್ಧಿಗೆ ಸಹಕರಿಸಿದ್ದಾರೆ. ಅವರಿಗೆ ಪಟ್ಟಣ ಪಂಚಾಯಿತಿ ವತಿಯಿಂದ ಧನ್ಯವಾದಗಳು ಅರ್ಪಿಸಲಿದ್ದೇವೆ. ಆಲಮೇಲ ತೋಟಗಾರಿಕೆ ಕಾಲೇಜು ಕಟ್ಟಡದ ಭೂಮಿ ಪೂಜೆ, ತಾಲೂಕಿನ ಕಡಣಿ ಬ್ರಿಜ್ ನಿರ್ಮಾಣದ ಭೂಮಿ ಪೂಜೆ, ಪಟ್ಟಣದ ಪ್ರಮುಖ ಎರಡು ರಸ್ತೆಗಳ ಸಿಸಿ ರಸ್ತೆಗಳ ನಿರ್ಮಾಣದ ಭೂಮಿ ಪೂಜೆ ನೆರವೇರಿಸಲು ಕರ್ನಾಟಕ ಸರ್ಕಾರದ ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ ಹಾಗೂ ಬೃಹತ್ ಕೈಗಾರಿಕಾ ಸಚಿವ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ, ಬಸವನ ಬಾಗೇವಾಡಿ ಶಾಸಕ ಶಿವಾನಂದ ಪಾಟೀಲ, ಸಿಂದಗಿ ಶಾಸಕ ಅಶೋಕ ಮನಗೂಳಿ ಅನೇಕ ಮುಖಂಡರು ಆಗಮಿಸಲಿದ್ದಾರೆ. ಬೃಹತ್ ಕಾರ್ಯಕ್ರಮದಲ್ಲಿ ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳ ಜನರು ಆಗಮಿಸಲಿದ್ದಾರೆ ಎಂದು ಹೇಳಿದರು.



# ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ

## ವಿಜಯಪುರದಲ್ಲಿ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಸಾರ್ವಜನಿಕರಿಗೆ ಕರೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಂತರರಾಷ್ಟ್ರೀಯ ಮಾದಕ ವಸ್ತು ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಒಂದು ವಾರಗಳ ಕಾಲ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸಲು ಜಾಥಾ, ವಿಚಾರ ಸಂಕಿರಣ ಹಾಗೂ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ್ ಕೆ ಹೇಳಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಮಂಗಳವಾರ ಮಾದಕ ದ್ರವ್ಯಗಳ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತರರಾಷ್ಟ್ರೀಯ ದಿನ ಆಚರಣೆಯ ದಿನ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು,ಮಾದಕ ದ್ರವ್ಯಗಳ ವ್ಯಸನವು ಇಂದು ಸಮಾಜ ಎದುರಿಸುತ್ತಿರುವ ಗಂಭೀರ ಸಮಸ್ಯೆಯಾಗಿದ್ದು, ಯುವಜನತೆ ತಮ್ಮ ಭವಿಷ್ಯವನ್ನು ಹಾಳುಮಾಡಿಕೊಳ್ಳುವಂತಹ ದುಷ್ಚಟಗಳಿಂದ ದೂರವಿರಬೇಕು ಎಂದು ಕರೆ ನೀಡಿದರು. ಮಾದಕ ವ್ಯಸನವು ವ್ಯಕ್ತಿಯ ಜೀವನವನ್ನಷ್ಟೇ ಅಲ್ಲ, ಕುಟುಂಬ ಮತ್ತು ಸಮಾಜದ ಮೇಲೆಯೂ ದುಷ್ಪರಿಣಾಮ ಬೀರುತ್ತದೆ. ಇದರಿಂದ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ ಎಂದು ಹೇಳಿದರು.

### ಪ್ರತಿಜ್ಞಾವಿಧಿ ಬೋಧನೆ

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಹಾಗೂ ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸುವ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.




### ಜನಜಾಗೃತಿ ಜಾಥಾ ಗೆ ಚಾಲನೆ



ನಗರದ ಶ್ರೀ ಸಿದ್ಧೇಶ್ವರ ದೇವಾಸ್ಥಾನದ ಆವರಣದಲ್ಲಿ ಮಾದಕ ದ್ರವ್ಯಗಳ ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರುದ್ಧ ಅಂತರರಾಷ್ಟ್ರೀಯ ದಿನ ಆಚರಣೆಯ ಅಂಗವಾಗಿ ನಡೆದ ಜನ ಜಾಗೃತಿ ಜಾಥಾಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಅವರು ಜಂಟಿಯಾಗಿ ಚಾಲನೆ ನೀಡಿದರು.

ಯುವಕರು ಮಾದಕ ವಸ್ತುಗಳ ಆಕರ್ಷಣೆಗೆ ಒಳಗಾಗದೇ ಶಿಕ್ಷಣ, ಕ್ರೀಡೆ ಹಾಗೂ ಸೃಜನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಕುರಿತು ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಟೆಲಿಮನಸ್ಸ ಟೋಲ್-ಫ್ರೀ ಮಾನಸಿಕ ಆರೋಗ್ಯದ ಸಹಾಯವಾಣಿ ಸಂಖ್ಯೆ 14416 ಉಚಿತ ಕರೆಮಾಡುವ ಮೂಲಕ ಕನ್ನಡ ಭಾಷೆಯಲ್ಲಿಯೂ ಸಹಾಯ ಮಾಡುವ ಈ ಸಹಾಯವಾಣಿಗೆ ಕರೆ ಮಾಡಿ ತಮ್ಮ ಎಲ್ಲ ತರಹದ ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು, ಇದರ ಪ್ರಯೋಜನ ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ರಾಮನಗೌಡ ಹಟ್ಟಿ,ಸಿಪಿಐ ಆರೀಫ್ ಮುಷಾಪುರಿ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಎಲ್.ಎಚ್ ಬಿದರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಸಾರ್ವಜನಿಕರು ಭಾಗವಹಿಸಿದ್ದರು.

### ಪೊಲೀಸ್ ಇಲಾಖೆಯಿಂದ ವಾರಪೂರ್ತಿ ಜಾಗೃತಿ ಅಭಿಯಾನ




ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಮಾತನಾಡಿ, ಜಿಲ್ಲೆಯ ಪ್ರತಿಯೊಂದು ಪೊಲೀಸ್ ಠಾಣೆ ವ್ಯಾಪ್ತಿಯಲ್ಲೂ ಮಾದಕ ದ್ರವ್ಯ ವಿರೋಧಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಈಗಾಗಲೇ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಲ್ಲಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಸಾರ್ವಜನಿಕ ಸ್ಥಳಗಳಲ್ಲಿ ಕರಪತ್ರ ವಿತರಣೆ, ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ಅಭಿಯಾನ, ವಿಚಾರ ಸಂಕಿರಣಗಳು ಹಾಗೂ ವಿವಿಧ ಸ್ಪರ್ಧೆಗಳ ಮೂಲಕ ಜನಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಮಾದಕ ದ್ರವ್ಯಗಳ ವಿರುದ್ಧದ ಅಭಿಯಾನ ಕೇವಲ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ, ಅದು ಸಮಾಜದ ಪ್ರತಿಯೊಬ್ಬರ ಹೋರಾಟವಾಗಬೇಕು ಎಂದು ಹೇಳಿದರು.

# ಸಕಾರಾತ್ಮಕವಾದ ಯೋಚನೆಯಿಂದ ಅಸಾಧ್ಯವೆಲ್ಲ ಸಾಧ್ಯ

■ ಉದಯರಶ್ಮಿ ದಿನಪತ್ರಿಕೆ

## ಮನದಂಗಳ

ಶಿಖರಪುರ ಪಟ್ಟಣದಲ್ಲಿ ಜೋನಾರ್ಸ್ ಎಂಬ ಹೆಸ–ರಿನ ಹೆಸರಾಂತ ಪಾದರಕ್ಷೆ ತಯಾರಿಸುವ ಕಂಪನಿಯು ಬಹಳ ವರ್ಷಗಳ ಕಾಲದಿಂದ ಮಹಿಳೆಯರು ಪುರುಷರು ಮತ್ತು ಮಕ್ಕಳ ಪಾದರಕ್ಷೆಗಳನ್ನು ತಯಾರಿಸುತ್ತಿತ್ತು. ತನ್ನ ಅತ್ಯಾಕರ್ಷಕ ವಿನ್ಯಾಸದ ಪಾದರಕ್ಷೆಗಳು ಮತ್ತು ಶೂಗಳ ಕಾರಣದಿಂದಾಗಿ ಅದು ಪ್ರಪಂಚದಾದ್ಯಂತ ತನ್ನದೇ ಆದ ಮಾರುಕಟ್ಟೆ ಜಾಲವನ್ನು ಹೊಂದಿತ್ತು. ಹಾಗಾಗಿ ಜೋನಾರ್ಸ್ ಸಂಸ್ಥೆಯ ಮಾಲೀಕನಾದ ದೇವೇಂದ್ರನಿಗೆ ತನ್ನ ಕಂಪನಿಯು ತಯಾರಿಸಿದ ಪಾದರಕ್ಷೆಗಳನ್ನು ಮಾರಾಟ ಮಾಡಲು ಯಾವುದೇ ಸಮಸ್ಯೆ ಆಗುತ್ತಿರಲಿಲ್ಲ. ತನ್ನ ಕಂಪನಿಯು ವಾರ್ಷಿಕವಾಗಿ ತಯಾ–ರಿಸುವ ಒಟ್ಟು ಪಾದರಕ್ಷೆಗಳ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯ ಪಾದರಕ್ಷೆಗಳ ಬೇಡಿಕೆಯು ಜಾಗತಿಕ ಮಾರುಕಟ್ಟೆಯಿಂದ ನಿರಂತರವಾಗಿ ಬರುತ್ತಾ ಇದ್ದುದರಿಂದ ವ್ಯವಹಾರವು ಅತ್ಯುನ್ನತವಾಗಿ ನಡೆಯುತ್ತಿತ್ತು.

ವರ್ಷಗಳು ಉರುಳಿದಂತೆ ಜೋನಾರ್ಸ್ ಕಂಪನಿಯ ಪಾದರಕ್ಷೆಗಳ ಗುಣಮಟ್ಟಕ್ಕಿಂತ ಉನ್ನತ ದರ್ಜೆಯ ಹಾಗೂ ಕಡಿಮೆ ದರದ ಪಾದರಕ್ಷೆಗಳು ಮಾರುಕಟ್ಟೆಯಲ್ಲಿ ಗ್ರಾಹಕ–ರಿಗೆ ಲಭಿಸುತ್ತಿದ್ದುದರಿಂದ ಜೋನಾರ್ಸ್ ಸಂಸ್ಥೆಯ ಪಾದರಕ್ಷೆಗಳಿಗೆ ಬೇಡಿಕೆಯು ಗಣನೀಯವಾಗಿ ಕುಸಿದು ವ್ಯವಹಾರವು ನಷ್ಟದ ಸ್ಥಿತಿಗೆ ಬಂದಿತು. ಇದನ್ನು ಅರಿತ ಜೋನಾರ್ಸ್ ಸಂಸ್ಥೆಯ ಮಾಲೀಕನಾದ ದೇವೇಂದ್ರನು ಯತೀಶ್ ಮತ್ತು ರತೀಶ್ ಎಂಬ ಎರಡು ಮಂದಿ ವಿದ್ಯಾವಂತ ಹಾಗೂ ಚಾಣಾಕ್ಷ ಮಾರಾಟ ವಿಸ್ತರಣಾಧಿಕಾ–ರಿಗಳನ್ನು ತನ್ನ ಕಂಪನಿಯ ಪಾದರಕ್ಷೆಗಳ ಮಾರಾಟವನ್ನು ವಿವಿಧ ದೇಶಗಳಿಗೆ ವಿಸ್ತ–ರಿಸುವ ಉದ್ದೇಶದಿಂದ ನೇಮಕ ಮಾಡಿದನು.

ಇಬ್ಬರೂ ಪ್ರಪಂಚದ ವಿವಿಧ ಮೂಲೆಗಳಿಗೆ ಜೋನಾರ್ಸ್ ಕಂಪೆನಿಯ ಪಾದರಕ್ಷೆಗಳು ಮತ್ತು ಶೂಗಳ ಮಾರಾಟದ ವಿಸ್ತರಣೆಗಾಗಿ ತೆರಳಿದರು. ಪ್ರಪಂಚವನ್ನು ಸುತ್ತಾಡುತ್ತಾ ತನ್ನ ಕಂಪೆನಿಯ ಪಾದರಕ್ಷೆಗಳ ಪ್ರಚಾರ ಮತ್ತು ಬೇಡಿಕೆಗಳನ್ನು ಪಡೆದುಕೊಳ್ಳುತ್ತಿದ್ದ ಈ ಇಬ್ಬರ ಪೈಕಿ ಯತೀಶನನ್ನು ಮಾಲೀಕನು ಒಮ್ಮೆ ಜೋರಾ ಜೋರಾ ಎನ್ನುವ ದ್ವೀಪಕ್ಕೆ ಕಳುಹಿಸಿದ. ದ್ವೀಪದಲ್ಲಿ ಇಳಿದ ಯತೀಶನು ಅತೀ ಹೆಚ್ಚಿನ ಸಂಖ್ಯೆಯ ಪಾದರಕ್ಷೆ ಮಾರಾಟಗಾರರನ್ನು ಭೇಟಿಯಾಗಿ ದೊಡ್ಡ ಮೊತ್ತದ ವ್ಯವಹಾರವನ್ನು ಕುದುರಿಸಬೇಕು ಎನ್ನುವ ನಿರೀಕ್ಷೆಯೊಂದಿಗೆ ದ್ವೀಪದೆಲ್ಲೆಡೆ ಸುತ್ತಾಡುತ್ತಾನೆ. ಆದ–’ರೆ ಯತೀಶನಿಗೆ ಅಲ್ಲಿ ಆಶ್ಚರ್ಯವೊಂದು ಕಾದಿತ್ತು, ಅದೇನೆಂದರೆ ಆ ದ್ವೀಪದಲ್ಲಿ ಯಾರೊಬ್ಬರ ಕಾಲಲ್ಲೂ ಪಾದರಕ್ಷೆಯೇ ಇರಲಿಲ್ಲ. ಅಲ್ಲಿನ ಹಲವು ಮಂದಿಯಲ್ಲಿ ಈ ಕುರಿತು







ಪ್ರಶ್ನಿಸಿದ ನಂತರ ಆ ದ್ವೀಪದ ಜನರು ಪಾದರಕ್ಷೆಯನ್ನೇ ಧ–ರಿಸುತ್ತಿರಲಿಲ್ಲ ಮತ್ತು ಅದರ ಉಪಯೋಗದ ಕುರಿತೂ ತಿಳಿದಿಲ್ಲ ಎನುವ ವಿಚಾರ ಯತೀಶನಿಗೆ ತಿಳಿಯುತ್ತದೆ. ಇದರಿಂದ ಬೇಸರಗೊಂಡ ಯತೀಶನು ಈ ದ್ವೀಪದ ಜನರಿಗೆ ಪಾದರಕ್ಷೆಯ ಬಳಕೆಯೇ ತಿಳಿದಿಲ್ಲ, ಇನ್ನು ಇಲ್ಲಿ ಪಾದರಕ್ಷೆಗಳ ಮಳಿಗೆಗಳು ಇರಲು ಸಾಧ್ಯವಿಲ್ಲ, ನಮ್ಮ ಕಂಪನಿಯ ಚಪ್ಪಲಿಗಳು ಮಾರಾಟ ಆಗಲೂ ಸಾಧ್ಯವಿಲ್ಲ ಎಂದು ಅಲ್ಲಿಂದ ಬರಿಗೈಯಲ್ಲಿ ತನ್ನ ಊರಿಗೆ ಮರಳುತ್ತಾನೆ.

ಹಲವು ತಿಂಗಳುಗಳು ಕಳೆದ ನಂತರ ದೇವೇಂದ್ರನು ತನ್ನ ಕಂಪನಿಯ ಮತ್ತೊಬ್ಬ ಮಾರಾಟ ವಿಸ್ತರಣಾಧಿಕಾ–ರಿಯಾದ ರತೀಶನನ್ನು ಜೋರಾ ಜೋರಾ ದ್ವೀಪಕ್ಕೆ ಪಾದರಕ್ಷೆಗಳ ಮಾರಾಟ ವಿಸ್ತರಣೆಗಾಗಿ ಕಳುಹಿಸುತ್ತಾನೆ. ದ್ವೀಪಕ್ಕೆ ಬಂದಿಳಿದ ರತೀಶನು ಅಲ್ಲಿನ ಜನಗಳ ಕಾಲಿನಲ್ಲಿ ಚಪ್ಪಲಿ ಯಾ ಶೂ ಇಲ್ಲದೇ ಇರುವುದನ್ನು ಗಮನಿಸಿ ಬಹಳಷ್ಟು ಮಂದಿಯಲ್ಲಿ ನೀವ್ಯಾರೂ ಚಪ್ಪಲಿಯನ್ನು ಧ–ರಿಸುವುದೇ ಇಲ್ಲವೇ ಎಂದು ಕೇಳುತ್ತಾನೆ.

ಎಲ್ಲರಿಂದಲೂ ಚಪ್ಪಲಿಯ ಬಳಕೆಯು ನಮಗೆ ತಿಳಿದೇ ಇಲ್ಲವೆಂಬ ಉತ್ತರವು ದೊರೆಯಿತು. ಇದನ್ನು ಅರಿತ ರತೀಶನ ವ್ಯವಹಾರ ಪ್ರಜ್ಞೆಯು ಜಾಗೃತವಾಗಿ, ಇಲ್ಲಿನ ಜನ–ರಿಗೆ ಚಪ್ಪಲಿಯ ಬಳಕೆಯೇ ತಿಳಿದಿಲ್ಲ. ಈ ದ್ವೀಪವೇ ನಮ್ಮ ಕಂಪನಿಯ ಚಪ್ಪಲಿಗಳನ್ನು ಪ್ರಚಾರ ಮತ್ತು ಮಾರಾಟ ಮಾಡಲು ಸೂಕ್ತವಾದ ಸ್ಥಳ ಎಂದು ನಿರ್ಧರಿಸುತ್ತಾನೆ. ಅದರಂತೆ ರತೀಶನು ತಾನು



ಬರುವಾಗ ಮಾರಾಟಗಾರ–ರಿಗೆ ತೋರಿಸಲೆಂದು ತಂದಿದ್ದ 5–10 ಚಪ್ಪಲಿಯ ಮಾದ–ರಿಗಳನ್ನು ಅಲ್ಲಿನ ಕೆಲವೊಂದಷ್ಟು ಜನರಿಗೆ ನೀಡಿ ಅವರಿಗೆ ಚಪ್ಪಲಿಯನ್ನು ಹಾಕಿಸಿ ತಾನೂ ಅವರೊಂದಿಗೆ ನಡೆದಾಡಿ ಚಪ್ಪಲಿಯ ಬಳಕೆಯಿಂದ ಆಗುವ ಪ್ರಯೋಜನಗಳನ್ನು ತಿಳಿಸಿದನು. ರತೀಶನು ನೀಡಿದ ಪ್ರಾತ್ಯಕ್ಷಿಕೆಯ ಮೂಲಕ ಚಪ್ಪಲಿಯ ಪ್ರಯೋಜನವನ್ನು ಅರಿತ ಸಾವಿರಾರು ಮಂದಿ ವಿವಿಧ ಅಳತೆಯ ಚಪ್ಪಲಿಗಳಿಗೆ ಬೇಡಿಕೆಯನ್ನು ಸಲ್ಲಿಸುತ್ತಾರೆ. ಬೇಡಿಕೆಯ ಪ್ರಕಾರ ಕಂಪನಿಯಿಂದ ಸಾವಿರಾರು ಜತೆ ಚಪ್ಪಲಿಗಳನ್ನು ತರಿಸಿ ಮಾರಾಟ ಮಾಡುತ್ತಾನೆ. ಇದರಿಂದ ಲಕ್ಷಗಟ್ಟಲೆ ಜೊತೆ ಚಪ್ಪಲಿಗಳಿಗೆ ಬೇಡಿಕೆ ನೇರವಾಗಿ ರತೀಶನಿಗೆ ಬಂದಿತು. ಬೇಡಿಕೆಯ ಪ್ರಮಾಣವನ್ನು ಅರಿತ ರತೀಶನು ಮಾಲೀಕನಿಗೆ ಇದೇ ದ್ವೀಪದಲ್ಲಿ ಜೊನಾರ್ಸ್ ಕಂಪನಿಯ ಮತ್ತೊಂದು ಉತ್ಪಾದನಾ ಘಟಕವನ್ನು ತೆರೆಯಲು ಮನವಿಯನ್ನು ಮಾಡುತ್ತಾನೆ. ರತೀಶನ ಮನವಿಯಂತೆ ಮಾಲೀಕ ವಿಲಿಯಮಸ್ ಜೋರಾ ಜೋರಾ ದ್ವೀಪದಲ್ಲಿ ತನ್ನ ಎರಡನೆಯ ಉತ್ಪಾದನಾ ಘಟಕವನ್ನು ತೆರೆಯುತ್ತಾನೆ. ಇದರಿಂದಾಗಿ ಜೋರಾ ಜೋರಾ ಎಂಬ ಚಪ್ಪಲಿಯ ಬಳಕೆಯೇ ತಿಳಿದಿರದ ಜನ–ರಿದ್ದ ದ್ವೀಪದಲ್ಲಿ ಜೋನಾರ್ಸ್ ಕಂಪನಿಯ ಪಾದರಕ್ಷೆಗಳಿಗೆ ಹೆಚ್ಚಿನ ಬೇಡಿಕೆ ಬಂದು, ದೊಡ್ಡ ಪ್ರಮಾಣದ ವ್ಯವಹಾರವನ್ನು ಮಾಡುವ ಕಂಪನಿಯಾಗಿ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿತು

ಇಲ್ಲಿ ಎರಡು ಮಂದಿ ವ್ಯವಹಾರ ವಿಸ್ತರಣಾಧಿಕಾ–ರಿಗಳ ಮನೋಧರ್ಮದಲ್ಲಿ ಮಾತ್ರ ಸಣ್ಣ ವ್ಯತ್ಯಾಸವಿತ್ತು. ಯತೀಶನು ಎಲ್ಲಾ ವಿಷಯದಲ್ಲೂ ಋಣಾತ್ಮಕ ವಾಗಿ ಯೋಚಿಸುತ್ತಿದ್ದರೆ, ರತೀಶನು ಎಲ್ಲವನ್ನೂ ಧನಾತ್ಮಕ ವಾಗಿಯೇ ನೋಡುತ್ತಿದ್ದನು. ಯತೀಶನು ಕಂಡಿದ್ದ ಋಣಾತ್ಮಕ ಅಂಶವನ್ನು ರತೀಶನು ಧನಾತ್ಮಕವಾಗಿ ನೋಡಿದ್ದರಿಂದ ಆ ಪುಟ್ಟದಾದ ದ್ವೀಪದಲ್ಲಿ ಜೋನರ್ಸ್ ಕಂಪನಿಯ ಚಪ್ಪಲಿಗಳು ಯಥೇಚ್ಛವಾಗಿ ಮಾರಾಟವಾಗಿ ಅಲ್ಲಿ ಜೋನರ್ಸ್ನ ಎರಡನೆಯ ಉತ್ಪಾದನಾ ಘಟಕದ ಸ್ಥಾಪನೆಗೆ ಕಾರಣವಾಗಿ ರತೀಶನು ಅದರ ಸಿ.ಇ.ಓ ಆಯ್ಕೆಯಾದನು. ವ್ಯಕ್ತಿಯು ಸಂದರ್ಭ ಮತ್ತು ಸನ್ನಿವೇಶವನ್ನು ನೋಡುವ ರೀತಿಯು ವ್ಯಕ್ತಿಯ ಬದುಕಿನ ದಿಕ್ಕನ್ನೇ ಬದಲಾಯಿಸಬಹುದು.

ಲೇಖನ
– ಸಂತೋಷ್ ರಾವ್ ಪೆರ್ಮುಡ
ಪೆರ್ಮುಡ ಮನೆ
ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ–574198
ದೂ:9742884160



# ಕಲ್ಯಾಣ ನಾಡು, ಕಲುಷಿತ ಮಾಡಲು ಬಿಡೋದಿಲ್ಲಬಸವಾದಿ ಶರಣರ ಹಿಂದೂ ಸಮಾವೇಶ ರದ್ದು ಪಡಿಸಲು ಹಣಮಂತ ಇಟಗಿ ಆಗ್ರಹ

ಕಲಬುರಗಿ:ಇದೇ ತಿಂಗಳು 28ರಂದು ಬಸವ ಕಲ್ಯಾಣದಲ್ಲಿ ನಡೆಸಲು ಉದ್ದೇಶಿಸಿರುವ ಬಸವಾದಿ ಶರಣರ ಹಿಂದೂ ಸಮಾವೇಶಕ್ಕೆ ರಾಜ್ಯ ಸರ್ಕಾರ ಮತ್ತು ಜಿಲ್ಲಾ ಆಡಳಿತ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಮತ್ತು ಈ ಸಮಾವೇಶವನ್ನು ರದ್ದು ಪಡಿಸಬೇಕು ಎಂದು ಡಾ.ಅಂಬೇಡ್ಕರ್ ಅರಿವು ಉತ್ಸವ ಸಮಿತಿ ಅಧ್ಯಕ್ಷ ಹಣಮಂತ ಇಟಗಿ ಆಗ್ರಹಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆಯೊಂದನ್ನು ನೀಡಿರುವ ಅವರು, ಇತ್ತೀಚಿಗೆ ದೇಶದಲ್ಲಿ ಸಾಮಾಜಿಕ ಪರಿವರ್ತನ ಚಳುವಳಿಗಾರರನ್ನು ಹಾಗೂ ಅವರ ವಿಚಾರಗಳನ್ನು ಕಲುಷಿತಗೊಳಿಸುವ ಮತ್ತು ಹತ್ತಿಕ್ಕುವ ಪ್ರಯತ್ನಗಳು ವ್ಯವಸ್ಥಿತವಾಗಿ ನಡೆಯುತ್ತಿವೆ. ಜಾತಿ ರಹಿತ, ವರ್ಗ ರಹಿತ ಸಮ ಸಮಾಜದ, ನಿರ್ಮಾಣಕ್ಕಾಗಿ ಪ್ರಜಾಪ್ರಭುತ್ವದ ತಳಹದಿಯ ಮೇಲೆ ಪರಿವರ್ತನಾ ಚಳುವಳಿಯನ್ನ ಕಟ್ಟಿದ, ಬುದ್ಧ, ಬಸವ, ಜ್ಯೋತಿಬಾ ಪುಲೆ, ಕನಕ ನಾಯಕರು, ಛತ್ರಪತಿ ಶಾಹು ಮಹಾರಾಜ್, ಬಾಬಾ ಸಾಹೇಬ್ ಡಾ. ಬಿ.ಆರ್ ಅಂಬೇಡ್ಕರ್, ನಾಲ್ವಡಿ ಕೃಷ್ಣರಾಜ ಒಡೆಯರ್, ಸ್ವಾಮಿ ವಿವೇಕಾನಂದ, ವಿಶ್ವ ಮಾನವ ಸಂದೇಶ ಸಾರಿದ, ರಾಷ್ಟ್ರಕವಿ ಕುವೆಂಪು ಹಾಗೂ ಈ ದೇಶದ ಸರ್ವ ಜನಾಂಗದ ವಿಮೋಚನೆ ಮಾಡಿದ, ಈ ದೇಶದ ರಾಷ್ಟ್ರೀಯ ಗ್ರಂಥ–’ವಾದ ನಮ್ಮ ಸಂವಿಧಾನದ ವಿಚಾರಧಾರೆಗಳ ವಿರೋಧಿಗಳು ಗುಂಪುಗಳನ್ನು ಕಟ್ಟಿಕೊಂಡು, ಇತಿಹಾಸವನ್ನು ತಿರುಚುವ ಮೂಲಕ, ಪೊಳ್ಳು ಕತೆಗಳನ್ನು ಸಾಮಾನ್ಯ ಜನರಲ್ಲಿ ಬಿತ್ತಿ, ಸೌಹಾರ್ದತೆ, ಭಾವೈಕ್ಯತೆಯಿಂದ ಬದುಕನ್ನು ಕಟ್ಟಿಕೊಂಡ, ಶಾಂತಿ ಸಮೃದ್ಧಿಯ ನಾಡನ್ನು, ಕೋಮು ಅಗ್ನಿಕುಂಡಕ್ಕೆ ತಳ್ಳುವಂತಹ ಚಟುವಟಿಕೆಗಳು ನಡೆಯುತ್ತಿವೆ. ಈ ಭಾಗದ ಸರ್ವ ಸಮುದಾಯದ ಜನ, ವೈಚಾ–ರಿಕವಾಗಿ ಮತ್ತು ಸಾಂವಿಧಾನಿಕವಾಗಿ ಇದನ್ನು ವಿರೋಧಿಸಬೇಕಾಗಿದೆ ಎಂದು ತಿಳಿಸಿದ್ದಾರೆ.



ಯಾವ ಧರ್ಮ ಜಾತಿಯನ್ನು ಪೊಷಿಸುತಿತ್ತೋ, ಯಾವ ಧರ್ಮ ಪುರುಷ ಮತ್ತು ಮಹಿಳೆ ಎಂಬ ತಾರತಮ್ಯ ಮಾಡುತ್ತಿತ್ತು, ಯಾವ ಧರ್ಮ ನಾವು ಶ್ರೇಷ್ಠ, ನೀವು ಕನಿಷ್ಠ ಎಂದು ನಡೆದುಕೊಳ್ಳುತ್ತಿತ್ತೋ, ಯಾವ ಧರ್ಮ ಜಾತಿಗಳನ್ನ ಪೊಷಿಸುತಿತ್ತೋ,ಯಾವ ಧರ್ಮ ಶ್ರೇಣಿಕೃತ ಸಮಾಜವನ್ನು ನಿರ್ಮಿಸಿತ್ತೋ, ಯಾವ ಧರ್ಮ ಜನರಿಗೆ ಮೌಢ್ಯತೆಗಳನ್ನು ಬಿತ್ತಿ, ಮಾನಸಿಕ ಗುಲಾಮರನ್ನಾಗಿ ಮಾಡಿತ್ತೋ, ಅಂತಹ ಧರ್ಮದ ವಿರುದ್ಧ ಕ್ರಾಂತಿಯನ್ನು ಮಾಡುವ ಮೂಲಕ, ನಿಸರ್ಗ ಸತ್ಯವನ್ನು ಸಾರಿ, ಸಮ ಸಮಾಜದ ನಿರ್ಮಾಣಕ್ಕಾಗಿ ಹೋರಾಡಿದ ಸಾಮಾಜಿಕ ಪರಿವರ್ತನಾ ಶರಣ ಪರಂಪರೆಯ ಹೆಸರಿನಲ್ಲಿ ಇಂದು ಸಮಾವೇಶ ಮಾಡುತ್ತಿರುವುದು ಖಂಡನೀಯವಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರ ಕ್ರಾಂತಿ–ಕಾರಿ ಅಣ್ಣ ಬಸವಣ್ಣನವರನ್ನು ನಾಡಿನ ಸಾಂಸ್ಕೃತಿಕ ನಾಯಕ ಎಂದು ಘೋಷಿಸುವ ಮೂಲಕ ಗೌರವವನ್ನು ನೀಡಿದೆ. ಸರ್ಕಾರವೇ ಸಾಂಸ್ಕೃತಿಕ ನಾಯಕ ಎಂದು ಗೌರವಿಸಿದ ಅಣ್ಣ ಬಸವಣ್ಣನವರ ವಿಚಾರಗಳಿಗೆ, ಮಸಿ ಬಳಿಯುವಂತಹ ಕುತಂತ್ರ ನಡೆಸುವ ಯಾವುದೇ ಸಂಘ,ಸಂಸ್ಥೆ, ಹಾಗೂ ವ್ಯಕ್ತಿಗಳಾಗಲಿ ಅವರಿಗೆ, ಸಾಂವಿಧಾನಿಕವಾಗಿ ಶಿಕ್ಷಿಸುವ ಮೂಲಕ, ಸರ್ಕಾರವೇ ನೇರವಾಗಿ ಕ್ರಮವನ್ನು ಕೈಗೊಂಡು, ಸಾಮಾಜಿಕ ಸುಧಾರಣೆಯ ಸುಧಾರಕರ ಚಿಂತನೆಗಳನ್ನು ರಕ್ಷಿಸುವ, ಅವರಿಗೆ ಗೌರವ ನೀಡುವಂತಹ, ಪವಿತ್ರ ಕೆಲಸ ಮಾಡಬೇಕಾಗಿದೆ. ಮುಂದೆಯೂ ಕೂಡ, ಸಮಾಜ ಸುಧಾರಣೆಯ ಯಾವ ನಾಯಕರಿಗೂ ಮತ್ತು ಅವರ ವಿಚಾರಗಳಿಗೂ, ಧಕ್ಕೆ ತರುವಂತಹ ತಂತ್ರ, ಕುತಂತ್ರದ ಸಮಾವೇಶಗಳಿಗೆ, ಸರ್ಕಾರ ಪರವಾನಿಗೆಯನ್ನು ನೀಡಬಾರದು ಎಂದು ಅವರು ಒತ್ತಾಯಿಸಿದ್ದಾರೆ.

ಬಸವ ಕಲ್ಯಾಣದಲ್ಲಿ ಜೂನ್ 28ಕ್ಕೆ ನಡೆಯುವ ಸಮಾವೇಶಕ್ಕೆ ಜಿಲ್ಲಾಡಳಿತ ಮತ್ತು ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಎಂದು ಅವರು ಆಗ್ರಹಿಸಿದ್ದಾರೆ.

# ಬರಗಾಲ ಘೋಷಿಸಲು ಒತ್ತಾಯಿಸಿ ಧರಣಿ ಸತ್ಯಾಗ್ರಹ

ಕಲಬುರಗಿ:ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ಮಳೆ ಕೊರತೆಯಿಂದ ಮುಂಗಾರು ಬಿತ್ತನೆ ಕುಂಠಿತವಾಗಿದೆ. ಎಲ್ ನಿನೊ ಪರಿಣಾಮದಿಂದಾಗಿ ಬರಗಾಲದ ಛಾಯೆ ಆವರಿಸಿದೆ. ಇದರಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮೇವಿನ ಕೊರತೆಯಿಂದ ಜಾನುವಾರುಗಳಿಗೆ ಸಂಕಷ್ಟ ಎದುರಾಗಿದೆ. ಈ ಎಲ್ಲಾ ಹಿನ್ನೆಲೆಯಲ್ಲಿ ಬರಗಾಲ ಘೋಷಿಸಿ ಬರಗಾಲ ಕಾಮಗಾರಿ ಆರಂಭಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘದ ನೇತೃತ್ವದಲ್ಲಿ ಬುಟ್ಟಿ, ಸಲುಕೆಗಳೊಂದಿಗೆ ಜಿಲ್ಲಾ ಪಂಚಾಯಿತಿ ಕಚೇರಿ ಮುಂದೆ ಇಂದು ಧರಣಿ ಸತ್ಯಾಗ್ರಹ ನಡೆಸಲಾಯಿತು.



ಬರಗಾಲ ಕಾಮಗಾರಿ ಆರಂಭಿಸುವಂತೆ ಆಗ್ರಹಿಸಿ ಮಹಿಳೆಯರು ಬುಟ್ಟಿ ತಲೆ ಮೇಲೆ ಹೊತ್ತು ಪ್ರತಿಭಟನೆ ಮಾಡಿದರು. ಪ್ರತಿಭಟನೆ ನಂತರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಬರಗಾಲ ಘೋಷಿಸಿ ಬರಗಾಲ ಕಾಮಗಾರಿ ಆರಂಭಿಸಬೇಕು, ವಿವಿಜಿ ರಾಮಜಿ ಯೋಜನೆ ರದ್ದು ಪಡಿಸಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮುಂದುವರೆಸಬೇಕು, ಭಂಕೂರ ಗ್ರಾಮದ 2000 ಜನರಿಗೆ ಕೆಲಸ ನೀಡಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

ಸಂಘದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ, ಉಪಾಧ್ಯಕ್ಷ ಕ್ಷೇಮಲಿಂಗ ನರೋಣಾ, ನಾಗೇಂದ್ರ ಕಂಟಿ, ಸಹ ಕಾರ್ಯದರ್ಶಿಗಳಾದ ಸಿದ್ದಮ್ಮ ದೇವನ್, ದಿಲೀಪ್ ನಾಗೂರ, ಸಾವಿತ್ರಿ ಮಾಲಗತ್ತಿ, ಸಾಯಬಣ್ಣಾ ಕೊರಬಾ, ದೇವಾನಂದ ಸೇ–ರಿದಂತೆ ಮತ್ತಿತರರು ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.

# ಛಾಯಾಗ್ರಾಹಕರಿಗೆ ಸಂಪನ್ಮೂಲ ವ್ಯಕ್ತಿ ಮುಸ್ತಫಾ ಬಾಶಾ ತರಬೇತಿ


ಕಲಬುರಗಿ:ನಗರದ ಕನ್ನಡ ಭವನದಲ್ಲಿ ಭಾನುವಾರ ಸೋನಿ ಕ್ಯಾಮೆರಾ ಕಂಪನಿ ಹಾಗೂ ಕಲಬುರಗಿ ಜಿಲ್ಲಾ ಫೊಟೋಗ್ರಾಫರ್ಸ ಅಸೋಸಿಯೇಷನ್ ಸಹಯೋಗ ದೊಂದಿಗೆ ಒಂದು ದಿನದ ತರಬೇತಿ ಕಾರ್ಯಕ್ರಮ ನಡೆಯಿತು.



ತರಬೇತುದಾರರಾಗಿ ಆಗಮಿಸಿದ್ದ ಮುಸ್ತಫಾ ಭಾಶಾ ಅವರು ಸೋನಿ ಕ್ಯಾಮೆರಾ ಬಗ್ಗೆ ತರಬೇತಿ ನೀಡಿದರು. ಇದೆ ಸಂಥರ್ಬದಲ್ಲಿ ಕಲಬುರಗಿ ಹಿರಿಯ ಛಾಯಾಗ್ರಾಹಕರಾದ ಜಯಶ್ರೀ ಗಂಗಾರಾಮ ರಾಠೋಡ ಮತ್ತು ಆಳಂದ ಹಿರಿಯ ಛಾಯಾಗ್ರಾಹಕರಾದ ಪ್ರಕಾಶ ಜಂಗಲೆ ಅವರು ಬೆಂಗಳೂರಿನಲ್ಲಿ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪಡೆದ ನಿಮಿತ್ಯ ಕನ್ನಡ ಸಾಹಿತ್ಯ ಪರಿಷತ್ತ ಅಧ್ಯಕ್ಷರಾದ ವಿಜಯಕುಮಾರ್ ಪಾಟೀಲ್ ತೆಗಲತಿಪ್ಪಿ ಅವರು ಅಸೊಶಿಯೇಶನ್ ವತಿಯಿಂದ ಸನ್ಮಾನಿಸಿದರು.

ಕಲಬುರಗಿ ಅಸೊಶಿಯೇಶನ್ ಅಧ್ಯಕ್ಷರಾದ ಬಸವರಾಜ ಸಿ ತೋಟದ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತರಬೇತಿಯ ನಂತರ ಕಲಬುರಗಿ ಜಿಲ್ಲಾ ಫೊಟೋಗ್ರಾಫರ್ಸ ಅಸೊಶಿಯೇಶನ್ ರಿ.ಯ 2024–25 ಹಾಗೂ 2025–26 ನೇ ಸಾಲಿನ ಸರ್ವ ಸದಸ್ಯರ ಸಾಮನ್ಯ ಸಭೆಯ ಲೆಕ್ಕ ಪತ್ರವು ಕಜಾಂಚಿಯಾದ ಶ್ರೀನಿವಾಸ ಮಡಕಿ ಮಂಡಿಸಿದರು.ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಸೈಯದ್ ನಸಿರುದಿನ್ ಕೆ ಪಟೇಲ್ ಕಾರ್ಯದರ್ಶಿ ಮಹಮ್ಮದ್ ಅಪ್ಸರ್ ಪಟೇಲ್ ಸಹ ಕಾರ್ಯದರ್ಶಿ ಯಾದ ಅನೀಲಕುಮಾರ ಗಣೇಶಕರ್ ಖಜಾಂಚಿ ಶ್ರೀನಿವಾಸ್ ಮಡಕಿ ಹಾಗೂ ಗೌರವ ಸಲಹೆಗಾರರಾದ ಚಂದ್ರಶೇಖರ್ ಬ್ಯಾಕೋಡ್ ಮಹಮ್ಮದ್ ಅಯಾಜುದ್ದೀನ್ ಪಟೇಲ್ ನಾಗೇಂದ್ರ ಸಕ್ಕರಗಿ.ಪ್ರಭುಲಿಂಗ ಜುಮ್ಮಣ್ಣ. ನಾರಾಯಣ ಎಂ ಜೋಶಿ. ಪ್ರಕಾಶ್ ಜಂಗ್ಲೆ ಶ್ರೀಕಾಂತ್ ಎಸ್ ಪಾಟೀಲ್ ವಿಜಯಕುಮಾರ್ ರಾಠೋಡ್ ಫಿರೋಜ್ ಖಾನ್ ಹಮೀದ್ ಪ್ರಕಾಶ ಶೇರಖಾನೆ ಅಭಿಲಾಷ ಸರಸಂಬಿ ಸಿದ್ದು ಚೇಟ್ಟಿ. ಅಂಬಾದಾಸ್ ಗಾಯಕವಾಡ ಆಕಾಶ್ ಪೂಜಾರಿ ಸಿದ್ದರಾಮಯ್ಯ ಬೆಲ್ಲದಮಠ ಮಲ್ಲಿಕಾರ್ಜುನ್ ತುಪ್ಪದಮಠ ಹಾಗೂ ಎಲ್ಲಾ ತಾಲ್ಲೂಕಿನ ಅದ್ಯಕ್ಷರು ಸೇರಿದಂತೆ ನೂರಾರು ಫೊಟೋಗ್ರಾಫರ್ಸ ಭಾಗವಹಿಸಿದರು.



## ಮನುಷ್ಯನ ಒತ್ತಡದ ಬದುಕಿಗೆ ಯೋಗ ಅವಶ್ಯಕ :ಶೇಗುಣಸಿ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ಮನುಷ್ಯನ ಪ್ರತಿದಿನದ ಒತ್ತಡದ ಬದುಕಿಗೆ ಯೋಗ ಅವಶ್ಯಕ ಪ್ರತಿಯೊಬ್ಬರು ಯೋಗ ಅಭ್ಯಾಸವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶ್ರೀ ಬನಶಂಕರಿ ಲಿಂಗಾಯತ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ), ಶ್ರೀ ಬನಶಂಕರಿ ಸಿ.ಬಿ.ಎಸ್.ಸಿ ಸ್ಕೂಲನ ಕಾರ್ಯದರ್ಶಿ ಕುಮಾರಿ ಎಸ್ ಎಸ್ ಶೇಗುಣಸಿ ಹೇಳಿದರು.

ತಾಲೂಕಿನ ಸಾವಳಗಿಯ ಶಾಲಾ ಆವರಣದಲ್ಲಿ ನಡೆದ ಯೋಗ ದಿನಾಚರಣೆಯ ಪ್ರಯುಕ್ತ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಮನಸ್ಸಿನ ತಳಮಳ ಅತಿಯಾದ ಕೋಪ ಗ್ಯಾಸ್ಟ್ರಿಕ್ ಅಲರ್ಜಿ ಅಂತಹ ಕಾಯಿಲೆಗಳಿಂದ ಮುಕ್ತಿಯಾಗಿ ಜೀವನ ನಡೆಸಲು ಯೋಗ ಒಂದು ಸರಳ ವಿಧಾನ. ನಿತ್ಯ ಜೀವನದಲ್ಲಿ ನಾವು ಯೋಗ ಅಳವಡಿಸಿಕೊಳ್ಳುವ ಮೂಲಕ ಸುಂದರವಾಗಿ ಜೀವನ ಸಾಗಿಸಬಹುದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಎಲ್ಲ ಸಿಬ್ಬಂದಿ ವರ್ಗದವರು, ಹಾಗೂ ಮಕ್ಕಳು ಸೇರಿದಂತೆ ಎಲ್ಲರೂ ಯೋಗಾಸನ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.




## ಯೋಗಾಭ್ಯಾಸ ವ್ಯಕ್ತಿತ್ವ ವಿಕಾಸಕ್ಕೆ ಸಹಕಾರಿ :ರಾಮಕೃಷ್ಣ ಗುರೂಜಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ನಗರದ ಭಗೀರಥ ಡೆವಲಪರ್‌ಗಳ ಮಾಲೀಕ ಅನೀಲ ಡಿ. ಅವಳೆ ಅವರ ಆಶ್ರಯದಲ್ಲಿ ಯೋಗ ತರಬೇತಿ ಸಪ್ತಾಹ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇಳೆ ಆಚಾರ್ಯ ರಾಮಕೃಷ್ಣ ಗುರೂಜಿ ಅವರು ಮಾತನಾಡಿ, ದೈನಂದಿನ ಯೋಗಾಭ್ಯಾಸವು ವ್ಯಕ್ತಿತ್ವ ವಿಕಾಸಕ್ಕೆ ಅತ್ಯಂತ ಸಹಕಾರಿಯಾಗಿದ್ದು, ಒತ್ತಡ ನಿವಾರಣೆ, ಏಕಾಗ್ರತೆ ಹಾಗೂ ಆತ್ಮವಿಶ್ವಾಸವನ್ನು ಹೆಚ್ಚಿಸಲು ನೇರವಾಗಿ ನೆರವಾಗುತ್ತದೆ ಎಂದು ಹೇಳಿದರು. ನಿವೃತ್ತ ಇಂಜಿನಿಯರ್ ಆರ್.ಎಲ್. ಹಳ್ಳೂರ ಅವರು ಅತಿಥಿಯಾಗಿ ಭಾಗವಹಿಸಿದ್ದರು. ಆರ್.ಕೆ. ಮೋಕಾಶಿ ಕಾರ್ಯಕ್ರಮ ನಿರ್ವಹಿಸಿದರು. ಈ ಸಂದರ್ಭದಲ್ಲಿ ಬಿ.ಎಸ್. ಸಜ್ಜನ ಚಿಗರಿ, ವಕೀಲ ಜಿ.ಬಿ. ಕೋಳೂರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.



## ಯೋಗವು ಒಂದು ಸರ್ವ ಸಿದ್ಧಿಸಾಧನ :ಉಷಾದೇವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ.ಸಂಸ್ಥೆಯ ಎಸ್.ಬಿ.ಕಲಾ ಹಾಗೂ ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ, ಐಐಸಿ, ಎನ್ ಎಸ್‌ಎಸ್ ಘಟಕದ ಸಂಯೋಜನೆಯಡಿಯಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಉಷಾದೇವಿ ಹಿರೇಮಠ ಮಾತನಾಡಿ, ಯೋಗವು ಒಂದು ಸರ್ವ ಸಿದ್ಧಿಸಾಧನವಾಗಿದೆ,ನಮ್ಮ ದೈಹಿಕ, ಮಾನಸಿಕ ಸದೃಡತೆಗೆ ಅಂತ್ಯಂತ ಅವಶ್ಯಕವಾಗಿದೆ. ಯೋಗವು ನಮ್ಮ ನಿತ್ಯದ ಬದುಕಿನಲ್ಲಿ ಸದಾ ಯೋಗಾಸನ ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಡಿಕೊಳ್ಳವಂತಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ದೈಹಿಕ ನಿರ್ದೇಶಕ ಎಸ್ ಕೆ ಪಾಟೀಲ್, ಡಾ. ಎಂ.ಬಿ.ಪಾಟೀಲ, ಎನ್‌ಎಸ್‌ಎಸ್ ಅಧಿಕಾರಿ ಪ್ರೊ.ಮಿಲನ್ ರಾಠೋಡ್, ಡಾ.ಕೆ.ಮಹೇಶಕುಮಾರ, ಎನ್ ಸಿಸಿ ಅಧಿಕಾರಿ ಡಾ.ರಾಮಚಂದ್ರ ನಾಯಕ ಮಹಾವಿದ್ಯಾಲಯದ ಇನ್ನಿತರ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅಕ್ರಮ ಮದ್ಯ ಮಾರಾಟ:ಇಬ್ಬರು ಮಹಿಳೆಯರು ಸೇರಿ ಮೂವರ ಬಂಧನ

ಕಲಬುರಗಿ:ನಗರದ ಸುನೀಲ ನಗರ ಫಿಲ್ಟರಬೆಡ್ ಕಮಾನ್ ಹತ್ತಿರ ಹನುಮಾನ ದೇವಸ್ಥಾನದ ಎದರುಗಡೆ ಇರುವ ಖುಲ್ಲಾ ಜಾಗದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಪಿಎಸ್‌ಐ ಕವಿತಾ ಚವ್ಹಾಣ್, ಸಿಬ್ಬಂದಿಗಳಾದ ಸಂಜೀವಕುಮಾರ, ರಾಜ–ಕುಮಾರ, ರೇವಣಸಿದ್ದ, ಕೃಷ್ಣ ಅವರು ದಾಳಿ ನಡೆಸಿ ಇಬ್ಬರು ಮಹಿಳೆಯರು ಮೂವರನ್ನು ಬಂಧಿಸಿದ್ದಾರೆ. ಚಂದ್ರಕಾಂತ ಪೂಜಾರಿ (49), ಕಮಲಾಬಾಯಿ ಗಾಡಿವಡ್ಡರ್ (50) ಮತ್ತು ಪುತಳಾಬಾಯಿ ಬಬಲಾದಿ (45) ಎಂಬುವವರನ್ನು ಬಂಧಿಸಿ 5040 ರೂ.ಮೌಲ್ಯದ ಮದ್ಯ ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಂಧನ ನಗರದ ಚೌಕ್ ಪೊಲೀಸ್ ಠಾಣೆ ವ್ಯಾಪ್ತಿಯ ಕಾವೇರಿ ನಗರದ ಜಿಡಿಎ ಕಾಲೋನಿಗೆ ಹೋಗುವ ರಸ್ತೆಯಲ್ಲಿರುವ ಲಂಗೋಟಿ ಪೀರ್ ದರ್ಗಾ ಹತ್ತಿರದ ಸಾರ್ವಜನಿಕ ರಸ್ತೆ ಮೇಲೆ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಎಸಿಪಿ ಜೇಮ್ಸ್ ಮಿನೇಜಸ್, ಸಿಬ್ಬಂದಿಗಳಾದ ಮೃತ್ಯುಂಜಯ, ಪ್ರದೀಪ್, ಅಶೋಕ, ನಾಗರಾಜ ಅವರು ದಾಳಿ ನಡೆಸಿ ಶಿವಕುಮಾರ ಕೋಲಕುಂದಿ (44) ಎಂಬಾತನನ್ನು ಬಂಧಿಸಿ 5,030 ರೂ.ನಗದು ಮತ್ತು 1 ಸಾವಿರ ರೂ.ಮೌಲ್ಯದ ಮೊಬೈಲ್, ಒಂದು ಬಾಲ್ ಪೆನ್ ಮತ್ತು ಮಟಕಾ ಚೀಟಿ ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶಾಲಾ ದಾಖಲಾತಿ ಕಳವು ನಗರದ ನಯಾ ಮೊಹಲ್ಲಾದಲ್ಲಿರುವ ಸರಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ದಾಖಲಾತಿಗಳು ಕಳೆದಿವೆ ಎಂದು ಶಾಲೆಯ ಮುಖ್ಯೋಪಾಧ್ಯಾಯರಾದ ಶಹಜಹಾನ್ ಬೇಗಂ ಅವರು ರೋಜಾ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಏ.14 ರಿಂದ ಮೇ.28 ರವರೆಗೆ ಶಾಲೆಗೆ ರಜೆ ಇದ್ದುದ್ದರಿಂದ ಶಾಲೆಯ ಸಿಬ್ಬಂದಿ ರಜೆ ಮೇಲೆ ಹೋಗಿದ್ದು, ಮೇ.29 ರಂದು ಮರಳಿ ಶಾಲೆಗೆ ಬಂದು ನೋಡಿದಾಗ ಶಾಲೆಯಲ್ಲಿದ್ದ 1985 ರಿಂದ 1999, 2002 ರಿಂದ 2005, 2008 ರಿಂದ 2011 ಮತ್ತು 2013 ರಿಂದ 2022ರವರೆಗಿನ ರಜಿಸ್ಟರಗಳು ಕಳವಾಗಿವೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಮೌನ ಯೋಗಿ ಚಿಕ್ಕೇನಕೊಪ್ಪದ ಚನ್ನವೀರ ಶರಣರು

## ಸಾವಿಲ್ಲದ ಶರಣರು

■ ಉದಯರಶ್ಮಿ ದಿನಪತ್ರಿಕೆ

ಚಿಕ್ಕೇನಕೊಪ್ಪದ ಶ್ರೀ ಚನ್ನವೀರ ಶರಣರು ಕರ್ನಾಟಕದ ಶರಣ ಪರಂಪರೆಯ ಅತ್ಯಂತ ಶ್ರೇಷ್ಠ ಹಾಗೂ ಅವಿಸ್ಮರಣೀಯ ಮೌನಯೋಗಿಗಳಾಗಿದ್ದಾರೆ.

ಗದಗ ಜಿಲ್ಲೆಯ ಗದಗ ತಾಲ್ಲೂಕಿನ ಬಳಗಾನೂರು ಗ್ರಾಮದ ಚಿಕ್ಕೇನಕೊಪ್ಪ ಮಠದಲ್ಲಿ ನೆಲೆಸಿ, ತಮ್ಮ ತಪಃಶಕ್ತಿಯಿಂದ ಜನಸಾಮಾನ್ಯರ ಉದ್ಧಾರಕ್ಕಾಗಿ ಶ್ರಮಿಸಿದ ಮಹಾಪುರುಷರಾಗಿದ್ದಾರೆ.

**ವ್ಯಕ್ತಿತ್ವ ಮತ್ತು ಜೀವನ**

ಶೈಲಿಅವಧೂತ ಜೀವನ: ಚನ್ನವೀರ ಶರಣರು ತನುವಿನಲ್ಲಿ ನಿರ್ಮೋಹತ್ವ, ಮನದಲ್ಲಿ ನಿರಹಂಕಾರ ಮತ್ತು ಜ್ಞಾನದಲ್ಲಿ ಪರಮಾನಂದವನ್ನು ರೂಢಿಸಿಕೊಂಡು ಸರಳವಾಗಿ ಬದುಕಿದವರು.

**ಮೌನಯೋಗಿ**

ಅವರು ಒಬ್ಬ ಅವಧೂತ ಫಕೀರನಂತೆ ಜೀವಿಸುತ್ತಾ, ಸಮಾಜಕ್ಕೆ ಶಾಂತಿ ಮತ್ತು ಸೌಹಾರ್ದತೆಯ ದಾರಿಯನ್ನು ತೋರಿಸಿದ ಮಹಾನ್ ತಪಸ್ವಿ.


ಸಾಹಿತ್ಯ ಮತ್ತು ಇತಿಹಾಸಶರಣರ ಪುರಾಣ ಗದಗದ ವೀರೇಶ್ವರ ಪುಣ್ಯಾಶ್ರಮದ ಖ್ಯಾತ ಸಂಗೀತಜ್ಞರಾದ ಪಂ. ಪುಟ್ಟರಾಜ ಗವಾಯಿಗಳು ಇವರ ಜೀವನ ಚರಿತ್ರೆಯನ್ನು ಆಧರಿಸಿ ಚಿಕೇನಕೊಪ್ಪದ ಚೆನ್ನವೀರ ಶರಣರ ಪುರಾಣ ಎಂಬ ಕೃತಿಯನ್ನು ರಚಿಸಿದ್ದಾರೆ.

ಜಾತ್ರೆ ಮತ್ತು ಪುಣ್ಯಸ್ಮರಣೋತ್ಸವ ವಾರ್ಷಿಕ ಉತ್ಸವ

ಪ್ರತಿವರ್ಷ ಜನವರಿ ಅಥವಾ ಫೆಬ್ರವರಿ ತಿಂಗಳಲ್ಲಿ ಇವರ ಪುಣ್ಯಸ್ಮರಣೋತ್ಸವ ಮತ್ತು ಮಹಾ ರಥೋತ್ಸವವನ್ನು ಸಡಗರದಿಂದ ಆಚರಿಸಲಾಗುತ್ತದೆ.

**ಶರಣರ ಬುತ್ತಿ**

ಈ ಜಾತ್ರೆಯ ಒಂದು ವಿಶಿಷ್ಟ



ಸಂಪ್ರದಾಯವೆಂದರೆ, ಸುತ್ತಮುತ್ತಲಿನ ಹಳ್ಳಿಗಳ ಮಹಿಳೆಯರು ಭಕ್ತರಿಗಾಗಿ ಸಾವಿರಾರು ರೊಟ್ಟಿ, ಶೇಂಗಾ ಹೋಳಿಗೆ ಮತ್ತು ಕರ್ಜಿಕಾಯಿಗಳನ್ನು ತಯಾರಿಸಿ, ಬುತ್ತಿಯನ್ನು ತಲೆಯ ಮೇಲೆ ಹೊತ್ತು ಮೆರವಣಿಗೆಯ ಮೂಲಕ ಶ್ರೀಮಠಕ್ಕೆ ತರುತ್ತಾರೆ.

**ಸಾಮಾಜಿಕ ಸೇವೆಗಳು**

ಜಾತ್ರೆಯ ಸಂದರ್ಭದಲ್ಲಿ ಉಚಿತ ಸಾಮೂಹಿಕ ವಿವಾಹಗಳು, ನೇತ್ರ ಚಿಕಿತ್ಸಾ ಶಿಬಿರಗಳು, ರಕ್ತದಾನ ಮತ್ತು ಆರೋಗ್ಯ ತಪಾಸಣೆಗಳನ್ನು ಹಮ್ಮಿಕೊಳ್ಳುವ ಮೂಲಕ ಶ್ರೀಮಠವು ಜನಪರ ಕಾರ್ಯಗಳನ್ನು ಮಾಡುತ್ತದೆ.

**ಶ್ರೀಮಠದ ಸಮಾಜ ಸೇವೆ**

ಚಿಕ್ಕೇನಕೊಪ್ಪದ ಶ್ರೀ ಚನ್ನವೀರ ಶರಣರ ಮಠವು ಕೇವಲ ಧಾರ್ಮಿಕ ಕೇಂದ್ರವಾಗಿರದೆ ಶಿಕ್ಷಣ ಸಂಸ್ಥೆಗಳು, ಉಚಿತ ಪ್ರಸಾದ ನಿಲಯ (ದಾಸೋಹ) ಮತ್ತು ಸಾವಯವ ಕೃಷಿ ಹಾಗೂ ಗೋಶಾಲೆಯನ್ನು ನಡೆಸುವ ಮೂಲಕ ಸಮಾಜಕ್ಕೆ ದೊಡ್ಡ ಕೊಡುಗೆ ನೀಡುತ್ತಿದೆ.

ಚಿಕ್ಕೇನಕೊಪ್ಪದ ಮೌನಯೋಗಿ, ಪೂಜ್ಯ ಶ್ರೀ ಚನ್ನವೀರ ಶರಣರ ವೈಯಕ್ತಿಕ ಲೌಕಿಕ ಜೀವನ ಮತ್ತು ಅವರ ತಂದೆ-ತಾಯಿಗಳ ನಿಖರವಾದ ಹೆಸರುಗಳ ಕುರಿತು ಇತಿಹಾಸದ ದಾಖಲೆಗಳಲ್ಲಾಗಲಿ ಅಥವಾ ಸಾರ್ವಜನಿಕ ಮೂಲಗಳಲ್ಲಾಗಲಿ ಯಾವುದೇ ಸ್ಪಷ್ಟ ಮಾಹಿತಿಯು ಲಭ್ಯವಿಲ್ಲ.

ಇದಕ್ಕೆ ಪ್ರಮುಖ ಕಾರಣಗಳು ಮತ್ತು ಅವರ ಹಿನ್ನೆಲೆಯ ಕುರಿತಾದ ಕೆಲವು ಮುಖ್ಯ ಸಂಗತಿಗಳು

ಅವಧೂತ ಹಾಗೂ ಮೌನ ಪರಂಪರೆ

ಶ್ರೀ ಚನ್ನವೀರ ಶರಣರು ಒಬ್ಬ ಪರಮ ಅವಧೂತರಾಗಿ ಮತ್ತು ಮೌನಯೋಗಿಯಾಗಿ ಜೀವಿಸಿದರು. ಅವರು ತಮ್ಮ ಪೂರ್ವಾಶ್ರಮದ (ಸಂಸಾರದ ಅಥವಾ ಹುಟ್ಟಿನ) ವಿವರಗಳನ್ನು ಸಂಪೂರ್ಣವಾಗಿ ತೊರೆದು, ಕೇವಲ ಲೌಕಿಕ ಜಗತ್ತಿನ ಕಲ್ಯಾಣಕ್ಕಾಗಿ ತಮ್ಮನ್ನು ಸಮರ್ಪಿಸಿಕೊಂಡಿದ್ದರು.

**ಬೆಳಕಿಗೆ ಬಾರದ ಹಿನ್ನೆಲೆ**

ಇತಿಹಾಸದ ಪ್ರಕಾರ, ಅವರು ಬಳಗಾನೂರಿನ ಚಿಕ್ಕೇನಕೊಪ್ಪ ಮಠಕ್ಕೆ ಬಂದು ನೆಲೆಸಿದ ನಂತರವೇ ಅವರ ದಿವ್ಯ ತಪಃಶಕ್ತಿ ಮತ್ತು ಪವಾಡಗಳು ಜನಸಾಮಾನ್ಯರಿಗೆ ತಿಳಿಯತೊಡಗಿದವು. ಹೀಗಾಗಿ ಅವರ ತಂದೆ, ತಾಯಿ ಅಥವಾ ಬಾಲ್ಯದ ಲೌಕಿಕ ವಿವರಗಳು ಮರೆಯಾಗಿ, ಅವರು ಕೇವಲ "ಚಿಕ್ಕೇನಕೊಪ್ಪದ ಶರಣರು" ಎಂದೇ ಪ್ರಸಿದ್ಧರಾದರು.

**ಸಾಹಿತ್ಯದಲ್ಲಿ ಉಲ್ಲೇಖ**

ಪಂ. ಪುಟ್ಟರಾಜ ಗವಾಯಿಗಳು ಬರೆದಿರುವ ಚಿಕೇನಕೊಪ್ಪದ ಚೆನ್ನವೀರ ಶರಣರ ಪುರಾಣ ಗ್ರಂಥದಲ್ಲಿಯೂ ಇವರ ಅಧ್ಯಾತ್ಮಿಕ ಸಾಧನೆ, ಪವಾಡಗಳು ಮತ್ತು ಸಮಾಜ ಮುಖಿ ಸೇವೆ ಬಗ್ಗೆ ಹೇಳಿದ್ದಾರೆಯೇ ಹೊರತು ಅವರ ಪೂರ್ವಾಶ್ರಮದ ಬಗ್ಗೆ ಮಾಹಿತಿ ನೀಡಿಲ್ಲ.

ಚಿಕ್ಕೇನಕೊಪ್ಪದ ಮಹಾನ್ ತಪಸ್ವಿ ಶ್ರೀ ಚನ್ನವೀರ ಶರಣರ ನಿಖರವಾದ ಹುಟ್ಟಿದ ದಿನಾಂಕ ಮತ್ತು ವರ್ಷ ಇತಿಹಾಸದ ದಾಖಲೆಗಳಲ್ಲಿ ಎಲ್ಲೂ ಲಭ್ಯವಿಲ್ಲ. ಅವರು ಒಬ್ಬ ಸಿದ್ಧ ಪುರುಷರಾಗಿದ್ದು, ಸಂಸಾರ ಹಾಗೂ ಕಾಲದ ಗಡಿಯಿಂದ ದೂರವಿದ್ದ ಕಾರಣ ಅವರ ಬಾಲ್ಯ ಮತ್ತು ಜನನದ ವಿವರಗಳು ಬೆಳಕಿಗೆ ಬಂದಿಲ್ಲ.



ಅವರ ಮಹಾಸಮಾಧಿ (ಮರಣ) ಹಾಗೂ ಪುಣ್ಯಸ್ಮರಣೆಯ

1. ಮರಣ / ಲಿಂಗೈಕ್ಯರಾದ ವಿವರ ಲಿಂಗೈಕ್ಯರಾದ ತಿಂಗಳು: ಶ್ರೀ ಚನ್ನವೀರ ಶರಣರು 1995 ಜನವರಿ ತಿಂಗಳ ಅವಧಿಯಲ್ಲಿ ಲಿಂಗೈಕ್ಯರಾದರು (ಮಹಾಸಮಾಧಿ ಹೊಂದಿದರು).

**ಘನಮೌನಿಗಳು**

ಶರಣರನ್ನು ಇತಿಹಾಸದಲ್ಲಿ "ಘನಮೌನಿ ಚಿಕ್ಕೇನಕೊಪ್ಪದ ಚನ್ನವೀರ ಶರಣರು" ಎಂದು ಕರೆಯಲಾಗುತ್ತದೆ. ಅವರು ಮೌನವ್ರತವನ್ನು ಆಚರಿಸುತ್ತಿದ್ದರಿಂದ ತಮ್ಮ ಜನ್ಮ ವೃತ್ತಾಂತವನ್ನು ಯಾರೊಂದಿಗೂ ಹಂಚಿಕೊಳ್ಳಲಿಲ್ಲ.

ದೈವೀಪುರುಷ: ಭಕ್ತರ ನಂಬಿಕೆಯ ಪ್ರಕಾರ, ಅವರು ಯಾವುದೇ ಸಾಮಾನ್ಯ ಮನುಷ್ಯನಂತೆ ಹುಟ್ಟು-ಸಾವಿನ ಬಂಧನಕ್ಕೆ ಒಳಗಾಗದೆ, ಕೇವಲ ಲೋಕ ಕಲ್ಯಾಣಕ್ಕಾಗಿ ಬಂದು ಮಠದಲ್ಲಿ ನೆಲೆಸಿದ ದೈವೀ ಸ್ವರೂಪಿಯಾಗಿದ್ದರು.ಪ್ರತಿ ವರ್ಷ ಜನೆವರಿ ತಿಂಗಳಲ್ಲಿ ನಡೆಯುವ ಅವರ ಪುಣ್ಯಸ್ಮರಣೆಯ ಜಾತ್ರೆಯಲ್ಲಿ ಲಕ್ಷಾಂತರ ಭಕ್ತರು ಪಾಲ್ಗೊಂಡು ಶರಣರ ಗದ್ದುಗೆಯ ದರ್ಶನ ಪಡೆಯುತ್ತಾರೆ. ಸಮಾಜಮುಖಿ ಕಾರ್ಯಕ್ರಮಗಳನ್ನು ನಿಯೋಜಿಸುವ ಮೂಲಕ ಬಸವ ತತ್ವ ಪ್ರಸಾರ ಮಾಡಿದರು.

ಮೌನವೇ ತಪಸ್ಸು ಮಾತು ಬೆಳ್ಳಿ ಮೌನ ಬಂಗಾರ ಎಂದು ತಿಳಿದು ಭಕ್ತರಿಗೆ ಸಂದೇಶ ನೀಡುತ್ತಿದ್ದರು. ಒಬ್ಬ ಶ್ರೇಷ್ಠ ಶಿವಯೋಗ ಸಾಧಕರು. ಸಾವಿಲ್ಲದ ಶರಣರು. ಬಸವ ಮಾರ್ಗದ ರೂವಾರಿಗಳು ಚಿಕ್ಕೇನಕೊಪ್ಪದ ಶರಣರು.

ಲೇಖನ
– ಡಾ ಶಶಿಕಾಂತ ಪಟ್ಟಣ
ರಾಮದುರ್ಗ – ಪುಣೆ



# ಅಗ್ನಿವೀರ ಹುದ್ದೆಗೆ ಆಯ್ಕೆಯಾದವರಿಗೆ ಗ್ರಾಮಸ್ಥರ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಮಾಡಬಾಳ ಗ್ರಾಮದ ಯುವಕ ಮಹೇಶ ಸಿದ್ದನಗೌಡ ಕೋಟಿಖಾನಿ ಹಾಗೂ ಅಜಯ ಜಟ್ಟೆಪ್ಪ ಹುಂಡೆಕಾರ ಇವರು ಗಡಿ ಕಾಯುವ ಅಗ್ನಿವೀರ ಹುದ್ದೆಗೆ ಆಯ್ಕೆಯಾದ ಪ್ರಯಕ್ತ ಗ್ರಾಮಸ್ಥರು ಶಾಲಾ ಆವರಣದಲ್ಲಿರುವ ಹುತಾತ್ಮ ವೀರಯೋಧ ಸೋಮರಾಯ ಬಗಲಿಯವರ ಪುತ್ಥಳಿಯ ಮುಂದೆ ಸನ್ಮಾನಿಸಿ ಗೌರವಿಸಿ ಬಿಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಮಾಜಿ ಸೈನಿಕ ಶಬ್ಬೀರಪಟೇಲ ಬಿರಾದಾರ ಮಾತನಾಡಿ, ಗಡಿಯಲ್ಲಿ ನಮ್ಮ ಯೋಧರು ಹಗಲು ರಾತ್ರಿಯನ್ನದೇ ರಕ್ಷಣೆ ಮಾಡುತ್ತಿರುವುದರಿಂದ ನಾವೆಲ್ಲ ನೆಮ್ಮದಿಯಿಂದ ಜೀವನ ನಡೆಸುತ್ತಿದ್ದೇವೆ. ದೇಶ ಸೇವೆ ಮಾಡೋದು ಎಂದರೆ ಅದೊಂದು ಪವಿತ್ರವಾದ ಕಾರ್ಯ ಕಾರಣ ಇಂದಿನ ಯುವಕರು ದುಶ್ಚಟಗಳಿಗೆ ಬಲಿಯಾಗದೇ ಸದೃಡ ಶರೀರದೊಂದಿಗೆ ದೇಶ ಸೇವೆ ಮಾಡಲು ಮುಂದೆ ಬರಬೇಕು ಎಂದು ಕರೆ ನೀಡಿದರು.

ಈವೇಳೆಮಾಜಿಸೈನಿಕಮಾಬುಪಟೇಲ ಬಿರಾದಾರ, ಶಿಕ್ಷಕ ಸಂತೋಷ ನಂದರಗಿ ಮಾತನಾಡಿ, ದೇಶ ಸೇವೆಗೆ ಗಂಡು ಹೆಣ್ಣು ಬೇದವಿಲ್ಲ ವಿದ್ಯಾರ್ಥಿದೆಸೆಯಿಂದಲೇ ದೇಶ ಸೇವೆ ಮಾಡುವ ಗುರಿ ಇಟ್ಟುಕೊಂಡು ಪ್ರಯತ್ನಿಸಿಬೇಕು.

ಒಬ್ಬ ರೈತ ಹಾಗೂ ಒಬ್ಬ ಸೈನಿಕ ಈ ದೇಶಕ್ಕೆ ದೊಡ್ಡ ಶಕ್ತಿ ಇವರಿಬ್ಬರ ನಿಸ್ವಾರ್ಥ ಸೇವೆಯಿಂದ ನಾವೆಲ್ಲ ಸಮೃದ್ದಿ ಜೀವನ ನಡೆಸಲು ಸಾಧ್ಯವಾಗಿದೆ ಎಂದರು.

ಈ ವೇಳೆ ಕನ್ನಡ ಹಾಗೂ ಉರ್ದು ಶಾಲೆಯ ಮುಖ್ಯೋಪಾಧ್ಯಯರು, ಮಾಜಿ ಸೈನಿಕರಾದ ಕಲ್ಲಪ್ಪ ಹೂಗಾರ, ಕಾಶೀನಾಥ ದೇಸಾಯಿ, ಎಸ್‌ಡಿಎಂಸಿ ಅಧ್ಯಕ್ಷ ಸಂಗನಗೌಡ ಪಾಟೀಲ, ಸದಸ್ಯರಾದ ಸಂತೋಷ ಬಗಲಿ, ಸಿದ್ದನಗೌಡ ಅಂಬಳನೂರ, ಮಲ್ಲಿಕಾರ್ಜುನ ಅಲ್ಲಾಪುರ,ಊರಿನಪ್ರಮುಖರಾದರಾಜೆಸಾಬ ಬಿರಾದಾರ, ದೇವರಡ್ಡಿ ಚಿಂಚೋಳಿ, ಬೀರಪ್ಪ ಬಗಲಿ, ಭೀಮಾಶಂಕರ ಅಗಸರ, ಸಿದ್ದು ಪೂಜಾರಿ, ಜಟ್ಟೆಪ್ಪ ಹುಂಡೇಕಾರ ಸೇರಿದಂತೆ ಗ್ರಾಮಸ್ಥರು, ಶಾಲಾ ಸಿಬ್ಬಂದಿ ಇದ್ದರು.

# 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪೋಲಿಯೊ ಹನಿ ಹಾಕಿಸಿ :ಕೀರ್ತಿ

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ತಾಲ್ಲೂಕಿನಾದ್ಯಂತ ಜೂನ್ 28ರಿಂದ ಜುಲೈ 1ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಯಾವುದೇ ಮಗು ಪೋಲಿಯೊ ಲಸಿಕೆಯಿಂದ ವಂಚಿತವಾಗದಂತೆ ಪೋಷಕರು ಕಡ್ಡಾಯವಾಗಿ ಎರಡು ಹನಿ ಲಸಿಕೆ ಹಾಕಿಸಬೇಕು ಎಂದು ತಹಶೀಲ್ದಾರ್ ಕೀರ್ತಿ ಚಾಲಕ ಮನವಿ ಮಾಡಿದರು.ಸೋಮವಾರ ತಹಶೀಲ್ದಾರ್ ಕಚೇರಿಯಲ್ಲಿ ನಡೆದ ಪಲ್ಸ್ ಪೋಲಿಯೊ ಲಸಿಕಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜೂನ್ 28ರಂದು ಪ್ರತೀ ಬೂತ್‌ಗಳಲ್ಲಿ ಲಸಿಕೆ ನೀಡಲಾಗುವುದು. ನಂತರ ಮೂರು ದಿನಗಳ ಕಾಲ ಆರೋಗ್ಯ ಸಿಬ್ಬಂದಿ ಮನೆ ಮನೆಗೆ ತೆರಳಿ ಮಕ್ಕಳಿಗೆ ಪೋಲಿಯೊ ಹನಿ ಹಾಕಲಿದ್ದಾರೆ. ಪೋಲಿಯೊ ಮಾರಕ ಕಾಯಿಲೆಯಾಗಿದ್ದು, ಕೇವಲ ಎರಡು ಹನಿ ಲಸಿಕೆಯಿಂದ ಮಕ್ಕಳನ್ನು ಜೀವಮಾನದ ಅಂಗವೈಕಲ್ಯದಿಂದ ರಕ್ಷಿಸಬಹುದು. ಹೀಗಾಗಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಎಲ್ಲರೂ ಸಹಕರಿಸಬೇಕು ಎಂದು ಕರೆ ನೀಡಿದರು.

ಲಸಿಕಾ ಅಭಿಯಾನಕ್ಕೆ ಮುನ್ನ ಎಲ್ಲ ಕೇಂದ್ರಗಳಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳುವಂತೆ ಹೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಗ್ರಾಮಗಳಲ್ಲಿ ಕರಪತ್ರ ಹಂಚಿಕೆ, ಡಂಗೂರ ಸಾರುವಿಕೆ ಹಾಗೂ ಶಾಲಾ ಮಕ್ಕಳ ಜಾಗೃತಿ ಜಾಥಾ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕರು ಅಭಿಯಾನದಲ್ಲಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದರು.

ಈ ವೇಳೆ ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ತಿವಾರಿ ಮಾತನಾಡಿ, ತಾಲ್ಲೂಕಿನಲ್ಲಿ 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಒಟ್ಟು 39,392 ಮಕ್ಕಳಿಗೆ ಪೋಲಿಯೊ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಇದಕ್ಕಾಗಿ 207 ಲಸಿಕಾ ಬೂತ್‌ಗಳನ್ನು ಸ್ಥಾಪಿಸಲಾಗಿದ್ದು, 6 ಮೊಬೈಲ್ ತಂಡಗಳನ್ನು ರಚಿಸಲಾಗಿದೆ. 414 ಸಿಬ್ಬಂದಿ ಹಾಗೂ 40 ಮೇಲ್ವಿಚಾರಕರು ಅಭಿಯಾನದಲ್ಲಿ ಕಾರ್ಯನಿರ್ವಹಿಸಲಿದ್ದಾರೆ. ಯಾವ ಮಗುವನ್ನೂ ಪೋಲಿಯೋ ವಂಚಿತರನ್ನಾಗಿಸಬೇಡಿ ಎಂದರು.

ಸಭೆಯಲ್ಲಿ ದೈಹಿಕ ಶಿಕ್ಷಣ ಪರಿವೀಕ್ಷಕ ಎ.ಜೆ.ದಖನಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಡಿಪಿಒ ಶಿವಲೀಲಾ ಸರಗಣಾಚಾರಿ, ಪಶು ಇಲಾಖೆಯ ಸಹಾಯಕ ನಿರ್ದೇಶಕ ಶಿವಾನಂದ ಮೇಟಿ, ಪುರಸಭೆಯ ಜಾವಿದ್ ನಾಯ್ಕೋಡಿ, ಆರೋಗ್ಯ ಇಲಾಖೆಯ ಅನುಸೂಯಾ ತೇರದಾಳ, ಎಂ.ಎಸ್. ಗೌಡರ, ಎಸ್.ಸಿ.ರುದ್ರವಾಡಿ, ಪ್ರಶಾಂತ್ ಕಡಿ, ಬಸವರಾಜ ಗೋಲಭಾವಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಆಲಮೇಲ ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಜೂ.25ರಂದು ಚಾಲನೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಆಲಮೇಲದಲ್ಲಿ ಜೂ.25ರಂದು ಸಾಯಂಕಾಲ 4ಗಂಟೆಗೆ ನಡೆಯುವ ಆಲಮೇಲ ತಾಲೂಕಿನ 6 ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ ಹಾಗೂ ಉದ್ಘಾಟನಾ ಕಾರ್ಯಕ್ರಮಗಳಿಗೆ ಕರ್ನಾಟಕ ಸರ್ಕಾರದ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಸಚಿವ ಎಂ.ಬಿ.ಪಾಟೀಲ ಹಾಗೂ ಮಾಜಿ ಸಚಿವ, ಹಾಲಿ ಶಾಸಕ ಶಿವಾನಂದ ಪಾಟೀಲ ಅವರು ರೂ.217ಕೋಟಿ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಆಗಮಿಸಿ ಚಾಲನೆ ನೀಡಲಿದ್ದಾರೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ಶಾಸಕರ ಕಛೇರಿಯಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಯನ್ನು ಉದ್ದೇಶಿಸಿ ಮಾತನಾಡಿದ ಅವರು, ಆಲಮೇಲ ತಾಲೂಕಿಗೆ 145ಕೋಟಿ 73ಲಕ್ಷ ರೂ. ವೆಚ್ಚದ ತೋಟಗಾರಿಕೆ ಕಾಲೇಜು ಮಂಜೂರಾಗಿದ್ದು, ಅದರ ಮೊದಲ ಹಂತವಾಗಿ ರೂ.39ಕೋಟಿ 90ಲಕ್ಷ, ಕಡಣಿ ಸೇತುವೆ ನಿರ್ಮಾಣಕ್ಕೆ ರೂ.44ಕೋಟಿ 50ಲಕ್ಷ, ಆಲಮೇಲ ಪಟ್ಟಣದಲ್ಲಿ ರೂ.20ಕೋಟಿ ವೆಚ್ಚದ 1.8ಕಿಮೀ ರಸ್ತೆ ಕಾಮಗಾರಿ ಪೂರ್ಣಗೊಂಡ ರಸ್ತೆಯ ಲೋಕಾರ್ಪಣೆ, ಆಲಮೇಲ ಪಟ್ಟಣದ ಬಜಾರ್ ರಸ್ತೆಯ ಅಭಿವೃದ್ಧಿಗೆ ರೂ.1ಕೋಟಿ 53ಲಕ್ಷ, ಕಡಣಿ ಕ್ರಾಸ್‌ನಿಂದ ವಿರಕ್ತಮಠದವರೆಗಿನ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ರೂ.1ಕೋಟಿ 86ಲಕ್ಷ ಹಾಗೂ ತಾಲೂಕು ಕ್ರೀಡಾಂಗಣ ಅಭಿವೃದ್ಧಿಗೆ ರೂ.2ಕೋಟಿ 94ಲಕ್ಷ ಮಂಜೂರಾಗಿದ್ದು, ಈ ಎಲ್ಲ ಕಾಮಗಾರಿಗಳ ಭೂಮಿಪೂಜೆ ಹಾಗೂ ಉದ್ಘಾಟನಾ ಸಮಾರಂಭ ನಡೆಯಲಿದೆ. ಆಲಮೇಲ ಪಟ್ಟಣದಲ್ಲಿರುವ ಕೆಬಿಜೆಎನ್‌ಎಲ್ 13ಎಕರೆ 6ಗುಂಟೆ ಜಮೀನಿನಲ್ಲಿ 3ಎ ಮಿನಿ ವಿಧಾನಸೌಧಕ್ಕೆ, 3ಎ ಕೋರ್ಟ್‌ಗೆ 1ಎ, ಅಗ್ನಿಶಾಮಕ ದಳಕ್ಕೆ ಮೀಸಲಿಡಲಾಗಿದ್ದು, ಉಳಿದ 6ಎ. 6ಗುಂಟೆ ಜಮೀನನ್ನು ತಾಲೂಕು ಕ್ರೀಡಾಂಗಣಕ್ಕೆ ಮೀಸಲಿಡಲಾಗಿದೆ. ಮುಂದಿನ ಎಲ್ಲ ಅನುದಾನಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ಹಲವು ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮಗಳನ್ನು ಅದ್ದೂರಿಯಾಗಿ ಆಯೋಜಿಸಲಾಗಿದ್ದು, ತಾಲೂಕಿನ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಆಲಮೇಲದಲ್ಲಿ ಸಾಯಂಕಾಲ ನಡೆಯುವ ಈ ಸಮಾರಂಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಕೋಳಾರಿ, ಜಿಲ್ಲಾ ಕೆಡಿಪಿ ಸದಸ್ಯ ನೂರಹಮ್ಮದ ಅತ್ತಾರ, ಪುರಸಭೆ ಮಾಜಿ ಉಪಾಧ್ಯಕ್ಷ ಸಂದೀಪ ಚೌರ, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಹಣಮಂತ ಸುಣಗಾರ, ಎಪಿಎಂಸಿ ಅಧ್ಯಕ್ಷ ಕಲ್ಲಪ್ಪ ನಾಯ್ಕೋಡಿ, ಆಲಮೇಲ ಪಪಂ ಅಧ್ಯಕ್ಷ ಸಾದಿಕ್ ಸುಂಬಡ, ಪ್ರಭು ವಾಲಿಕಾರ, ಪ್ರವೀಣ ಕಂಠಿಗೊಂಡ, ಭೀಮು ಬಮ್ಮನಹಳ್ಳಿ, ಕುಮಾರ ದೇಸಾಯಿ, ಬಸವರಾಜ ತೇಲ್ಲೂರ, ಪ್ರಶಾಂತ ನಾಶಿ, ಮುನ್ನಾ ಚೌಧರಿ, ಶಶಿಧರ ಗಣಿಯಾರ, ಸುನಂದಾ ಯಂಪೂರೆ, ಜಯಶ್ರೀ ಹದನೂರ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

# ಯೋಗದಿಂದ ವ್ಯಕ್ತಿಯ ದೇಹ ಮತ್ತು ಮನಸ್ಸು ಶುದ್ಧಿ :ನ್ಯಾ.ಸಚಿನ್ ಕೌಶಿಕ್

■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಯೋಗವು ವ್ಯಕ್ತಿಯ ದೇಹ ಮತ್ತು ಮನಸ್ಸಿನ ಶುದ್ಧೀಕರಣದ ಜೊತೆಗೆ ಉತ್ತಮ ವ್ಯಕ್ತಿತ್ವ ರೂಪಿಸಲು ಸಹಕಾರಿಯಾಗಿದೆ. ಹಾಗಾಗಿ ಯುವಜನತೆ ಸೇರಿದಂತೆ ಪ್ರತಿಯೊಬ್ಬರೂ ಯೋಗವನ್ನು ತಮ್ಮ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಂಡು ಆರೋಗ್ಯವಂತ, ಸದೃಢ ಹಾಗೂ ಮೌಲ್ಯಯುತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರೂ ಹಾಗೂ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಚಿನ್ ಕೌಶಿಕ್ ಕರೆ ನೀಡಿದರು.

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ ಹಾಗೂ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ, ಅದು ಮಾನಸಿಕ ನೆಮ್ಮದಿ, ಆತ್ಮವಿಶ್ವಾಸ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಜೀವನ ಪದ್ಧತಿಯಾಗಿದೆ. ಪ್ರತಿನಿತ್ಯ ಕೆಲವೇ ನಿಮಿಷಗಳ ಯೋಗಾಭ್ಯಾಸವು ಒತ್ತಡವನ್ನು ಕಡಿಮೆ ಮಾಡಿ, ಉತ್ತಮ ಚಿಂತನೆಗಳನ್ನು ಬೆಳೆಸುತ್ತದೆ. ಯೋಗದಿಂದ ವ್ಯಕ್ತಿಯಲ್ಲಿ ಸಹನೆ, ಸಂಯಮ, ಶಿಸ್ತು ಹಾಗೂ ಸಮಾಜದ ಬಗ್ಗೆ ಕಾಳಜಿ ಮೂಡುತ್ತದೆ. ಇದೇ ಗುಣಗಳು ಉತ್ತಮ ನಾಗರಿಕನ ನಿರ್ಮಾಣಕ್ಕೆ ನೆರವಾಗುತ್ತವೆ. ಹಾಗಾಗಿ ಪ್ರತಿಯೊಬ್ಬರೂ ಯೋಗಾಭ್ಯಾಸವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ ಮಾತನಾಡಿ, ಯೋಗ ಮತ್ತು ಪ್ರಾಣಾಯಾಮಗಳು ಭಾರತದ ಪ್ರಾಚೀನ ಸಾಂಸ್ಕೃತಿಕ ಪರಂಪರೆಯ ಅವಿಭಾಜ್ಯ ಅಂಗಗಳಾಗಿದ್ದು, ಸಾವಿರಾರು ವರ್ಷಗಳಿಂದ ಆರೋಗ್ಯಕರ ಜೀವನಶೈಲಿಯ ಭಾಗವಾಗಿ ಆಚರಣೆಯಲ್ಲಿವೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಪ್ರಯತ್ನದ ಫಲವಾಗಿ 2014ರಲ್ಲಿ ವಿಶ್ವಸಂಸ್ಥೆಯು ಅಂತರರಾಷ್ಟ್ರೀಯ ಯೋಗ ದಿನವನ್ನು ಘೋಷಿಸಿತು. ಅಂದಿನಿಂದ ಪ್ರಪಂಚದಾದ್ಯಂತ ಪ್ರತಿವರ್ಷ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಇದು ಪ್ರತಿಯೊಬ್ಬ ಭಾರತೀಯನ ಹೆಮ್ಮೆಯ ವಿಷಯ ಎಂದರು.



ಇಂದಿನ ಸಮಾಜದಲ್ಲಿ ಮನುಷ್ಯನಿಗೆ ಸ್ವಾರ್ಥದ ಮನೋಭಾವ ಹೆಚ್ಚಾಗುತ್ತಿದೆ. ಆದರೆ ಪ್ರತಿದಿನ ಯೋಗಾಭ್ಯಾಸವನ್ನು ಜೀವನದ ಭಾಗವನ್ನಾಗಿ ಮಾಡಿಕೊಂಡರೆ ಸ್ವಾರ್ಥ ತಾನಾಗಿಯೇ ಕರಗಿ, ನಿಸ್ವಾರ್ಥ ಸೇವಾ ಮನೋಭಾವ ಬೆಳೆಯುತ್ತದೆ. ಪ್ರತಿಯೊಬ್ಬರೂ ಯೋಗಾಭ್ಯಾಸವನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ."

■ **ಸಚಿನ್ ಕೌಶಿಕ್**
ಅಧ್ಯಕ್ಷರು, ತಾಲೂಕು ಕಾನೂನು ಸೇವಾ ಸಮಿತಿ ಹಾಗೂ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.

**ಯುವ ಜನತೆ ಈಗಿನಿಂದಲೇ ಯೋಗಾಭ್ಯಾಸವನ್ನು ತಮ್ಮ ದಿನನಿತ್ಯದ ಜೀವನದ ಭಾಗವನ್ನಾಗಿ ಮಾಡಿಕೊಂಡರೆ, ವೃದ್ಧಾಪ್ಯದಲ್ಲಿಯೂ ಉತ್ತಮ ಆರೋಗ್ಯ ಮತ್ತು ಮಾನಸಿಕ ಸದೃಢತೆಯನ್ನು ಕಾಪಾಡಿಕೊಳ್ಳಲು ಸಾಧ್ಯ. ಆದ್ದರಿಂದ ಪ್ರತಿಯೊಬ್ಬರೂ ಯೋಗ ಮತ್ತು ಪ್ರಾಣಾಯಾಮವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು."**

■ **ಶಶಿಕಾಂತ ಮಾಲಗತ್ತಿ**
**ಅಧ್ಯಕ್ಷರು, ನ್ಯಾಯವಾದಿಗಳ ಸಂಘ.**

ಪ್ರತೀ ವರ್ಷ ಅಂತರಾಷ್ಟ್ರೀಯ ಯೋಗ ದಿನದಂದು ನ್ಯಾಯಾಲಕ್ಕೆ ಆಗಮಿಸಿ ಯೋಗಾಭ್ಯಾಸದ ಬಗ್ಗೆ ಅರಿವು ಮೂಡಿಸುತ್ತಿರುವ ಯೋಗ ಶಿಕ್ಷಕ ಎ.ಬಿ.ಹಡಪದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಹಿರಿಯ ಸಿವಿಲ್ ನ್ಯಾಯಾಧೀಶರಾದ ರವೀಂದ್ರಕುಮಾರ ಕಟ್ಟಿಮನಿ, ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳೂ ಹಾಗೂ ಸಿವಿಲ್ ನ್ಯಾಯಾಧೀಶರಾದ ರಾಮಮೂರ್ತಿ ಎನ್, ನ್ಯಾಯವಾದಿಗಳ ಸಂಘದ ಪ್ರ.ಕಾರ್ಯದರ್ಶಿ ಪಿ.ಬಿ.ಗೌಡರ, ನ್ಯಾಯವಾದಿಗಳಾದ ಚೇತನ ಶಿವಶಿಂಪಿ, ನಾಗಭೂಷಣ ನಾವದಗಿ, ರವಿ ನಾಲತವಾಡ, ವಿ.ಸಿ.ಉರಾನ್, ರಾಯನಗೌಡ ಬಿರಾದಾರ, ಕಾನೂನು ಸೇವಾ ಸಮಿತಿಯ ಆಡಳಿತ ಸಹಾಯಕ ಅರವಿಂದ ಕುಂಬಾರ, ದಲಾಯತ್ ಮಹಾಂತೇಶ ಹಚರೆಡ್ಡಿ, ಶಿರಸ್ತೇದಾರ ಸುರೇಶ ಬಳಗಾನೂರ, ಸಿಬ್ಬಂದಿಗಳಾದ ರೇಣುಕಾ ಜಾನಮಟ್ಟಿ, ಪದ್ಮಾ ಗಾಯಕವಾಡ, ಶೀಲಾ ವೆಂಕಟರೆಡ್ಡಿ, ಎ.ಆರ್. ಕರಡಿ, ಲಲಿತಾ ನಾಯಕ, ಸುಶ್ಮಾ ಬಾಣಿ, ಜ್ಯೋತಿ ಹೆಬ್ಬಾಳ, ಕಾವೇರಿ ರಾಠೋಡ, ಅಶೋಕ ಕುಂಬಾರ, ಕೆ.ವಾಯ್.ಬಿಸನಾಳ, ತಿರುಪತಿ ದಾಸರ, ಬಸವರಾಜ ಹುಣಶ್ಯಾಳ, ರೇಣುಕಾ ಚಲವಾದಿ, ಮಲ್ಲಿಕಾರ್ಜುನ ಕಂಚಲಕಾಯಿ, ಪ್ರಸನ್ನ ಎಸ್, ಮಹೇಶ್, ನಿಸಾರ ನೆಗಿನಾಳ, ಬಸವರಾಜ ದಡ್ಡಿ, ಗಫೂರಸಾಬ ಜಾಹಗೀರದಾರ, ಶ್ರೀಶೈಲ ಹಿರೇಮಠ, ಸಂತೋಷ ಗಣಿ, ಸಂಗು ರೆಡ್ಡಿ, ಈರಯ್ಯ ಹಿರೇಮಠ, ಮಹೇಶ ಕೆ.ಎಸ್ ಸೇರಿದಂತೆ ಮತ್ತಿತರರು ಭಾಗಿಯಾಗಿದ್ದರು.

## ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ಮೋಹರಂ ಹಬ್ಬದ ಶಾಂತಿ ಪಾಲನಾ ಸಭೆ

# ಮೋಹರಂ ಆಚರಣೆ ಭಾವೈಕ್ಯತೆಗೆ ಸಾಕ್ಷಿಯಾಗಲಿ :ಸಿಪಿಐ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ಪಟ್ಟಣದಲ್ಲಿಯ ಹಿಂದೂ-ಮುಸ್ಲಿಂ ಬಾಂದವರು ಮೊದಲಿನಿಂದಲೂ ಸಹೋದರತೆ ಭಾವನೆಯಿಂದ ಸಾಗಿಬಂದವರಾಗಿದ್ದೀರಿ ಮೋಹರಂ ಹಬ್ಬದ ದಫನ್ ಸಮಯದಲ್ಲಿ ಎಲ್ಲ ಬಾಂದವರು ಸಹೋದರತೆ ಬಾತೃತ್ವದೊಂದಿಗೆ ಹಬ್ಬಕ್ಕೆ ವಿಶೇಷ ಮೇರಗನ್ನು ತರುವಂತಹ ಕಾರ್ಯ ಮಾಡಿ ಭಾವೈಕ್ಯತೆಗೆ ಸಾಕ್ಷೀಯಾಗಲೆಂದು ಸಿಪಿಐ ಮಹ್ಮದಪಶುಉದ್ದೀನ ಅವರು ಹೇಳಿದರು.ಸೋಮವಾರರಂದು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮೋಹರಂ ಹಬ್ಬದ ನಿಮಿತ್ಯವಾಗಿ ಕರೆಯಲಾದ ಶಾಂತಿ ಪಾಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದ ಅವರು ತಾಳಿಕೋಟೆ ಪಟ್ಟಣವು ಶಾಂತಿಪ್ರೀಯತೆಗೆ ಸಾಕ್ಷೀ ಯಾದ ಪಟ್ಟಣವಾಗಿದೆ ಹಿಂದೂ- ಮುಸ್ಲಿಂ ಹಬ್ಬಗಳಲ್ಲಿ ಎಲ್ಲರೂ ಮೊದಲಿಂದಲೂ ಸಹೋದರತೆಯೊಂದಿಗೆ ಭಾಗವಹಿಸುತ್ತಾ ತಾಳಿಕೋಟೆ ನಗರಕ್ಕೆ ಒಳ್ಳೆಯ ಹೆಸರನ್ನು ತಂದಿದ್ದೀರಿ ಅದರಂತೆ ಮುಂದೆಯೂ ಇದೇ ರೀತಿ ಸಾಗಲಿ ಎಂದು ಆಶಿಸಿದ ಅವರು ಮೋಹರಂ ಹಬ್ಬದ ಆಚರಣೆ ಸಮಯದಲ್ಲಿ ಯಾರೋ ಕುಚೇಷ್ಠಿಗಳಿಂದ ಸಣ್ಣ ಪುಟ್ಟ ಗಲಾಟೆಗಳಾಗುತ್ತಿದ್ದರೂ ಕೂಡಲೇ ನಮ್ಮ ಪೊಲೀಸ್ ಇಲಾಖೆಗೆ ಮಾಹಿತಿ ಒದಗಿಸುವಂತಹ ಕೆಲಸ ಮಾಡಿ ಇದರಿಂದ ಸಮಾಜದಲ್ಲಿ ಸಾಮರಸ್ಯ ಕದುಡುವ ಕೆಲಸಕ್ಕೆ ತಡೆಯಲು ಸಾದ್ಯವಾಗಲಿ ಎಂದರು. ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್ ಅವರು ಮಾತನಾಡಿ ಮೋಹರಂ ಹಬ್ಬವೂ ಈಗಾಗಲೇ ಪ್ರಾರಂಭಗೊಂಡಿದೆ 5 ಬಡಾವಣೆಗಳಲ್ಲಿ ಪಂಚಸೈಯದ ದರ್ಗಾ, ಬಿಸ್ತಿ ಓಣಿ, ಮಹಲ್ ಗಲ್ಲಿ, ಬೇಪಾರಿ ಅವರ ಓಣಿ, ಮಕಾಂದಾರಿ ಓಣಿ, ದವಲ್ ಮಲ್ಲಿಕ ದರ್ಗಾ ಹತ್ತಿರದಲ್ಲಿ ದೇವರುಗಳನ್ನು ಕೂಡಿಸಲಾಗಿದೆ ಶುಕ್ರವಾರರಂದು ದೇವರುಗಳ ದಫನ್ ಕಾರ್ಯ ನಡೆಯಲಿದೆ ಅಂದೇ ರಾತ್ರಿ 10 ಗಂಟೆಗೆ ಡೋಲಿ ಮೇರವಣಿಗೆ ನಡೆಯಲಿದೆ ಎಂಬ ಮಾಹಿತಿ ಲಭ್ಯವಾಗಿದೆ ಈಗಾಗಲೇ ಪೊಲೀಸ್ ಠಾಣೆಗೆ ಸಲ್ಲಿಸಿದ ಮಾಹಿತಿಯಂತೆ ಮತ್ತು ಆಯಾ ಬಡಾವಣೆಗಳ ದೇವರುಗಳ ದಫನ್ ಕಾರ್ಯವೂ ಸಮಯಕ್ಕನುಸಾರ ನಡೆದರೆ ಯಾವುದೇ ರೀತಿ ತೊಂದರೆಯಾಗುವದಿಲ್ಲಾ ಪೊಲೀಸ್ ಇಲಾಖೆಯೊಂದಿಗೆ ಎಲ್ಲರೂ ಸಹಕರಿಸಬೇಕೆಂದರು.

ಈ ಸಮಯದಲ್ಲಿ ಮುಖಂಡರುಗಳಾದ ಪ್ರಭುಗೌಡ ಮದರಕಲ್ಲ, ಸಿದ್ದನಗೌಡ ಪಾಟೀಲ ನಾವದಗಿ, ಅಣ್ಣಾಜಿ ಜಗತಾಪ, ಶಮಶುದ್ದೀನ ನಾಲಬಂದ, ಹುಸೇನ ಜಮಾದಾರ, ಜೈಭೀಮ ಮುತ್ತಗಿ, ಶರಣಗೌಡ ಪಾಟೀಲ, ನಿರಂಜಶಾ ಮಕಾಂದಾರ, ಡಿ.ವ್ಹಿ.ಪಾಟೀಲ, ಮಂಜೂರ ಬೇಪಾರಿ, ನಬಿರಸೂಲ, ಎಂ.ಜಿ.ಪಾಟೀಲ, ಶಫೀಕ್ ಇನಾಮದಾರ, ಅಬುಬಕರ ಲಾಹೋರಿ, ಎ.ಬಿ.ಪೊಲೀಸ್‌ಪಾಟೀಲ, ಆಸೀಪ ಕೇಂಭಾವಿ, ಅಬ್ದುಲರಜಾಕ ಮುಲ್ಲಾ, ಸಾಹೇಬಗೌಡ ಬಿರಾದಾರ, ಪಿ.ಎಸ್.ಪಾಟೀಲ, ಮೊದಲಾದವರು ಉಪಸ್ಥಿತರಿದ್ದರು.

# ಯೋಗವು ಭಾರತವು ಜಗತ್ತಿಗೆ ನೀಡಿದ ಕೊಡುಗೆ : ಶ್ರೀಶೈಲಗೌಡ



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಯೋಗವು ಭಾರತವು ಜಗತ್ತಿಗೆ ನೀಡಿದ ಅತ್ಯಂತ ಅಮೂಲ್ಯವಾದ ಕೊಡುಗೆಯಾಗಿದ್ದು, ದೈಹಿಕ ಸದೃಢತೆಯ ಜೊತೆಗೆ ಮಾನಸಿಕ ಶಾಂತಿ ಹಾಗೂ ಆಧ್ಯಾತ್ಮಿಕ ಬೆಳವಣಿಗೆಯನ್ನು ನೀಡುವ ಮಹಾನ್ ಪರಂಪರೆಯಾಗಿದೆ ಎಂದು ಬಿಎನ್‌ಬಿ ಫೌಂಡೇಶನ್ ಅಧ್ಯಕ್ಷ ಹಾಗೂ ಯುವ ಮುಖಂಡ ಶ್ರೀಶೈಲಗೌಡ ಬಿರಾದಾರ ಹೇಳಿದರು.

ನಗರದ ಜ್ಯೋತಿಮಂಗಲ ಕಾರ್ಯಾಲಯದಲ್ಲಿ ಲಿಟಲ್ ವಿಂಗ್ಸ್ ಸ್ಕೂಲ್ ಮತ್ತು ಬಿ ಎನ್ ಬಿ ಫೌಂಡೇಶನ್ ಸಹಯೋಗದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿಗೆ ನೀರುಣಿಸಿ ಅವರು ಮಾತನಾಡಿದರು.

ಭಾರತದ ಯೋಗಕ್ಕೆ ಜಾಗತಿಕ ಮಟ್ಟದಲ್ಲಿ ಮನ್ನಣೆ ದೊರೆತಿದ್ದು, ವಿಶ್ವದಾದ್ಯಂತ ಜನರು ಯೋಗಾಭ್ಯಾಸದ ಮೂಲಕ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಅತಿಥಿಯಾಗಿ ಮಾತನಾಡಿದ ಶಿಕ್ಷಕ ಸಿದ್ದು ಚಿಂಚೋಳಿ, ಯೋಗವು ದೈಹಿಕ, ಮಾನಸಿಕ ಹಾಗೂ ಭಾವನಾತ್ಮಕ ಆರೋಗ್ಯವನ್ನು ಸುಧಾರಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದು, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಪ್ರೇರೇಪಿಸುತ್ತದೆ ಎಂದು ತಿಳಿಸಿದರು.

ಯುವ ಮುಖಂಡ ರಜತ ತಾಂಬೆ ಮಾತನಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ಮಲ್ಲಣ್ಣ ಮನಗೂಳಿ, ಶೇಕುಂತಲಾ ಹಿರೇಮಠ, ಶಿಕ್ಷಣ ಸುಧಾರಣಾ ಸಮಿತಿ ಸದಸ್ಯ ಹಾಗೂ ಶಿಕ್ಷಕ ಸಿದ್ಧಲಿಂಗ ಚೌಧರಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮುಖ್ಯ ಗುರುಮಾತೆ ಪೂಜಾ ಗಾಯಕ್ವಾಡ ಸ್ವಾಗತಿಸಿದರು. ಅಕ್ಷತಾ ಚೌಹಾಣ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಅಧ್ಯಕ್ಷ ಅಭಿಷೇಕ್ ಚೌಧರಿ ವಂದಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸಂಚಾಲಕಿ ಭಾರತಿ ಚೌಧರಿ, ಸುಷ್ಮಾ ಚೌಧರಿ, ಶಿಕ್ಷಕಿಂಯರಾದ ಸಂಧ್ಯಾ ಪತ್ತಾರ, ಕೀರ್ತಿಕಾ ಚೌಧರಿ, ಅಮೃತ ಯಾತನೂರ, ವಿದ್ಯಾ ಜಂಗಿನಮಠ, ಮಂಗಳ ಮುಗುರುಮುಖಾನೆ, ಪೂಜಾ ಪಾಟೀಲ, ನಾಗರೇಖಾ ನೆಲೋಗಿ, ಭಾಗ್ಯಾ ಆನಗೊಂಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಉತ್ತಮ ಮಳೆಗಾಗಿ ಪ್ರಾರ್ಥಿಸಿ ಗ್ರಾಮಸ್ಥರಿಂದ ಗಂಗಾ ಪೂಜೆ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಉತ್ತಮ ಮಳೆ, ಕೃಷಿ ಸಮೃದ್ಧಿ ಹಾಗೂ ಜನಜೀವನದ ಒಳಿತಿಗಾಗಿ ತಾಲೂಕಿನ ಮಟ್ಟಿಹಾಳ ಗ್ರಾಮಸ್ಥರು ಮಂಗಳವಾರ ಪಟ್ಟಣದ ಹತ್ತಿರದ ಕೃಷ್ಣಾ ನದಿ ತೀರದಲ್ಲಿ ಸಂಪ್ರದಾಯಬದ್ಧವಾಗಿ ಗಂಗಾ ಪೂಜೆ ಮತ್ತು ವಿಶೇಷ ಪ್ರಾರ್ಥನೆ ನೆರವೇರಿಸಿದರು.

ಹಿಂದೂ ಸಂಪ್ರದಾಯದಲ್ಲಿ ಗಂಗಾಮಾತೆಯ ಆರಾಧನೆಗೆ ವಿಶೇಷ ಮಹತ್ವವಿದ್ದು, ಜಲಾಭಿಷೇಕದ ಮೂಲಕ ವರುಣ ದೇವರನ್ನು ಪ್ರಾರ್ಥಿಸುವ ಪದ್ಧತಿ ಅನಾದಿ ಕಾಲದಿಂದಲೂ ನಡೆದುಬಂದಿದೆ. ಗಂಗಾಜಲವು ಶಿವನಿಗೆ ಅತ್ಯಂತ ಪ್ರಿಯವಾದುದು ಎಂಬ ನಂಬಿಕೆಯಿಂದ ಗ್ರಾಮಸ್ಥರು ಭಕ್ತಿಭಾವದಿಂದ ಪೂಜೆ ಸಲ್ಲಿಸಿದರು.

ಮುಂಗಾರು ಆರಂಭವಾದರೂ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ರೈತರಲ್ಲಿ ಆತಂಕ ಹೆಚ್ಚಾಗಿದೆ. ರಾಜ್ಯದ ಹಲವು ಭಾಗಗಳಲ್ಲಿ ನೀರಿನ ಕೊರತೆ ತೀವ್ರಗೊಂಡಿದ್ದು, ಕೆರೆ-ಕಟ್ಟೆಗಳು ಬತ್ತುತ್ತಿರುವ ಪರಿಸ್ಥಿತಿಯಲ್ಲಿ ಉತ್ತಮ ಮಳೆಯಾಗಲೆಂದು ವಿಶೇಷ ಪ್ರಾರ್ಥನೆ ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ನೂರಾರು ಮುತ್ತೈದೆಯರು ಕುಂಭದೊಂದಿಗೆ ಕೃಷ್ಣಾ ನದಿ ದಡಕ್ಕೆ ತೆರಳಿ ಗಂಗಾಮಾತೆಗೆ ಅಭಿಷೇಕ ನೆರವೇರಿಸಿದರು. ಅರಿಶಿನ, ಕುಂಕುಮ, ಹೂವು ಹಾಗೂ ನೈವೇದ್ಯವನ್ನು ಅರ್ಪಿಸಿ, ನಾಡಿನಲ್ಲಿ ಉತ್ತಮ ಮಳೆಯಾಗಿ ಸಮೃದ್ಧಿ ನೆಲೆಸಲೆಂದು ಸಂಕಲ್ಪ ಮಾಡಿದರು.

> "ಬರ ಪರಿಸ್ಥಿತಿ ಎದುರಾದರೆ ಜನರು ಹಾಗೂ ಜಾನುವಾರುಗಳು ಕುಡಿಯುವ ನೀರಿಗಾಗಿ ಪರದಾಡುವಂತಾಗುತ್ತೆ. ಈ ಹಿನ್ನೆಲೆಯಲ್ಲಿ ಉತ್ತಮ ಮಳೆಯಾಗಿ ನಾಡಿನಲ್ಲಿ ಸಮೃದ್ಧಿ ನೆಲೆಸಲೆಂದು ಭಗವಂತನಲ್ಲಿ ಪ್ರಾರ್ಥನೆ ಸಲ್ಲಿಸಲಾಗಿದೆ,"
> ■ ಗೌಡಪ್ಪ ಬಿರಾದಾರ
> ಮಟ್ಟಿಹಾಳ ಗ್ರಾಮದ ರೈತ

ಪೂಜೆ ಬಳಿಕ ಗ್ರಾಮಸ್ಥರು ಹಾಗೂ ಮಹಿಳೆಯರು ಕೊಲ್ಹಾರದ ಕೃಷ್ಣಾ ನದಿ ದಡದಿಂದ ಹತ್ತಾರು ಕಿಲೋಮೀಟರ್‌ಗಳ ಪಾದಯಾತ್ರೆ ಮೂಲಕ ಮಟ್ಟಿಹಾಳ ಗ್ರಾಮಕ್ಕೆ ತೆರಳಿ ಗ್ರಾಮದ ದೇವರುಗಳಿಗೆ ವಿಶೇಷ ಪೂಜೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಸಿದ್ದು ಬಿರಾದಾರ, ಈರಪ್ಪ ಬಿರಾದಾರ, ಯಮನಪ್ಪ ಬಿರಾದಾರ, ಪರಸು ಗೋಳಗೊಂಡ, ಸಗಪ್ಪ ಅಂಗಡಗೇರಿ, ಸಿದ್ದು ರಾ. ಬಿರಾದಾರ, ಈರಣ್ಣ ಮನಗೂಳಿ, ಹಣಮಂತ ತೇಲಿ, ಪರಸು ಗು. ಗೋಳಗೊಂಡ, ಸಚಿನ್ ಬಿರಾದಾರ, ದುಂಡಪ್ಪ ಪೂಜಾರಿ, ಬೀರು ಪೂಜಾರಿ, ಸಂಗಪ್ಪ ಬಿರಾದಾರ, ಬಸು ಮಟ್ಟಿಹಾಳ ಹಾಗೂ ಹಣಮಂತ ಬಿರಾದಾರ ಸೇರಿದಂತೆ ಗ್ರಾಮಸ್ಥರು ಮತ್ತು ನೂರಾರು ಮಹಿಳೆಯರು ಭಾಗವಹಿಸಿದ್ದರು.

# ಹನಿಟ್ರ್ಯಾಪನಿಂದ ಯುವಕನ ಅಪಹರಣ : 8 ಆರೋಪಿಗಳ ಬಂಧನ!

## ವಿಜಯಪುರ ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಶ್ಲಾಘನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಗಾಂಧಿಚೌಕ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಯುವಕನ ಅಪಹರಣ ಪ್ರಕರಣವನ್ನು ಪೊಲೀಸರು ಕೇವಲ ಎರಡು ದಿನಗಳಲ್ಲಿ ಭೇದಿಸಿ, ಅಪಹರಣಕ್ಕೊಳಗಾದ ಯುವಕನನ್ನು ಸುರಕ್ಷಿತವಾಗಿ ರಕ್ಷಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಒಟ್ಟು 8 ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಮಂಗಳವಾರ ನಗರದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಸುದ್ದಿಗೋಷ್ಠಿಯಲ್ಲಿ ಪ್ರಕರಣದ ಕುರಿತು ಮಾಹಿತಿ ನೀಡಿದರು.

ಘಟನೆ ವಿವರ: ಜೂನ್ 19ರಂದು ಕಸ್ತೂರಿ ಕಾಲೋನಿಯ ನಿವಾಸಿ ಮಮ್ತಾಜ್ ಇಮಾಮಜಾಪರ್ ಚಪ್ಪರಬಂಧ ಅವರು ತಮ್ಮ ಪುತ್ರ ಸಾಹಿಲ್ ಇಮಾಮಜಾಪರ್ ಚಪ್ಪರಬಂಧ (22) ಅಪಹರಣಕ್ಕೊಳಗಾಗಿರುವ ಕುರಿತು ದೂರು ನೀಡಿದ್ದರು. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಪೊಲೀಸರು ವಿಶೇಷ ತನಿಖಾ ತಂಡ ರಚಿಸಿ ಕಾರ್ಯಾಚರಣೆ ಆರಂಭಿಸಿದ್ದರು.

ತನಿಖೆಯಲ್ಲಿ ಬಹಿರಂಗವಾದ ಮಾಹಿತಿ ಪ್ರಕಾರ, ಸಾಹಿಲ್ ವಿಜಯಪುರ ಸರ್ಕಾರಿ ಆಸ್ಪತ್ರೆಯಲ್ಲಿ ಅಡುಗೆ ಸಹಾಯಕನಾಗಿ ಕೆಲಸ ಮಾಡುತ್ತಿದ್ದನು. ಎರಡು ತಿಂಗಳ ಹಿಂದೆ ತನ್ನ ಕುಟುಂಬದ 2 ಎಕರೆ ಜಮೀನನ್ನು ರೂ. 26 ಲಕ್ಷಕ್ಕೆ ಮಾರಾಟ ಮಾಡಿರುವ ವಿಷಯವನ್ನು ಸಹೋದ್ಯೋಗಿ ಮಹಮ್ಮದ್ ರಫೀಕ್‌ಗೆ ತಿಳಿಸಿದ್ದನು. ಈ ಮಾಹಿತಿಯನ್ನು ಬಳಸಿಕೊಂಡ ಆರೋಪಿಗಳು ಹಣಕ್ಕಾಗಿ ಸಾಹಿಲ್‌ನನ್ನು ಅಪಹರಿಸುವ ಸಂಚು ರೂಪಿಸಿದ್ದರು. ಇದಕ್ಕಾಗಿ ಯುವತಿಯೊಬ್ಬಳನ್ನು ಬಳಸಿಕೊಂಡು ಸಾಹಿಲ್‌ಗೆ ಪರಿಚಯ ಮಾಡಿಸಿ ಸ್ನೇಹ ಬೆಳೆಸಲಾಗಿತ್ತು.

ಜೂನ್ 18ರಂದು ಯುವತಿ ವಿಜಯಲಕ್ಷ್ಮಿ ಸಾಹಿಲ್‌ಗೆ ಕರೆ ಮಾಡಿ ವಿಜಯಪುರದ ಸರ್ಕಾರಿ ಆಸ್ಪತ್ರೆ ಹಿಂಭಾಗದ ಖಾಲಿ ಜಾಗಕ್ಕೆ ಬರಲು ತಿಳಿಸಿದ್ದಳು. ಅಲ್ಲಿಗೆ ಹೋದ ಸಾಹಿಲ್‌ನನ್ನು ಆರೋಪಿಗಳು ಸ್ಕಾರ್ಪಿಯೋ ವಾಹನದಲ್ಲಿ ಅಪಹರಿಸಿ ಕರೆದೊಯ್ದಿದ್ದರು.

ನಂತರ ಸಾಹಿಲ್‌ನ ಮೊಬೈಲ್‌ನಿಂದಲೇ ಆತನ ತಾಯಿಗೆ ಕರೆ ಮಾಡಿಸಿ, "ನಿಮ್ಮ ಮಗ ನಮ್ಮ ಬಳಿ ಇದ್ದಾನೆ. ಅವನನ್ನು ಬಿಡಲು ರೂ. 12 ಲಕ್ಷ ಹಣ ನೀಡಬೇಕು" ಎಂದು ಬೇಡಿಕೆ ಇಟ್ಟಿದ್ದರು.

ಮೊಬೈಲ್ ಕರೆಗಳ ಮಾಹಿತಿ ಹಾಗೂ ತಾಂತ್ರಿಕ ತನಿಖೆಯ ಆಧಾರದ ಮೇಲೆ ಆರೋಪಿಗಳ ಚಲನವಲನವನ್ನು ಪತ್ತೆ ಹಚ್ಚಿದ ಪೊಲೀಸರು, ಅವರು ವಿಜಯಪುರದಿಂದ ಗದಗ, ಅಲ್ಲಿಂದ ಗೋವಾ ಹಾಗೂ ಬಳಿಕ ಬೆಳಗಾವಿ ಜಿಲ್ಲೆಯ ಘಟಪ್ರಭಾ ಭಾಗದಲ್ಲಿ ಇರುವುದನ್ನು ಗುರುತಿಸಿದರು.

ಜೂನ್ 21ರಂದು ಘಟಪ್ರಭಾ ಸಮೀಪ ದಾಳಿ ನಡೆಸಿ ಅಪಹರಣಕ್ಕೊಳಗಾದ ಸಾಹಿಲ್‌ನನ್ನು ಸುರಕ್ಷಿತವಾಗಿ ರಕ್ಷಿಸಿ ಆರೋಪಿಗಳನ್ನು ವಶಕ್ಕೆ ಪಡೆದರು.

ಪ್ರಕರಣವನ್ನು ದಾಖಲಾಗಿದ ಕೇವಲ ಎರಡು ದಿನಗಳಲ್ಲಿ ಭೇದಿಸಿದ ತನಿಖಾ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಶ್ಲಾಘಿಸಿದ್ದಾರೆ.

### ಬಂಧಿತ ಆರೋಪಿಗಳು

* ಗೋಪಾಲ ಯಮನಪ್ಪ ಮಾದರ (28)
* ನಿಂಗಪ್ಪ ಭೂತಾಳಿ ನಾವದಗಿ (27)
* ಮಹಮ್ಮದ್ ರಫೀಕ್ ನಧಾಪ (27)
* ವಿಜಯಲಕ್ಷ್ಮಿ ತೊನಶ್ಯಾಳ (24)
* ದಶರಥ ಸೋಮಪ್ಪ ಮಾದರ (21)
* ಶಿವಾನಂದ ಮೃತ್ಯುಂಜಯ ನಂದಿಕೋಲಮಠ (25)
* ಸುನೀಲ್ ಗಿರಿಮಲ್ಲಪ್ಪ ನಾವಿ (20)
* ಶಿವಕುಮಾರ ಶರಣಪ್ಪ ಹೊಸಟ್ಟಿ (23)

### ವಶಪಡಿಸಿಕೊಂಡ ವಸ್ತುಗಳು

* ಅಪಹರಣಕ್ಕೆ ಬಳಸಿದ *ಒಲೂ-06-ಒಫ-7474* ಸಂಖ್ಯೆಯ ಸ್ಕಾರ್ಪಿಯೋ ವಾಹನ
* 7 ಮೊಬೈಲ್ ಫೋನ್‌ಗಳು

# ರೂ. 1.02 ಕೋಟಿ ಮೌಲ್ಯದ ಅಕ್ರಮ ಮದ್ಯ ಜಪ್ತಿ :ನಾಲ್ವರ ಬಂಧನ!

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯ ಜಲನಗರ ಪೊಲೀಸ್ ಠಾಣೆ ವ್ಯಾಪ್ತಿಯ ಕೋಲ್ಹಾರ ನಾಕಾ ಬಳಿ ಅಕ್ರಮವಾಗಿ ಸಾಗಾಟ ಮಾಡಲಾಗುತ್ತಿದ್ದ ಭಾರಿ ಪ್ರಮಾಣದ ಮದ್ಯವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

ಮಂಗಳವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಪ್ರಕರಣದ ಕುರಿತು ಮಾಹಿತಿ ನೀಡಿದರು.

ಈ ಕಾರ್ಯಾಚರಣೆಯಲ್ಲಿ ಸುಮಾರು ರೂ. 1,02,79,560 ಮೌಲ್ಯದ ಮದ್ಯ, ಲಾರಿ ಹಾಗೂ ಇತರೆ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

ತಮ್ಮ ನಿರ್ದೇಶನದಂತೆ ಅಕ್ರಮ ಮದ್ಯ ಮಾರಾಟ, ತಯಾರಿಕೆ ಹಾಗೂ ಸಾಗಾಟದ ವಿರುದ್ಧ ಕಟ್ಟುನಿಟ್ಟಿನ ನಿಗಾ ವಹಿಸಲಾಗುತ್ತಿದ್ದು, ಮಂಗಳವಾರ ಮುಂಜಾನೆ ಡಿಎಸ್ಪಿ ನಾಗರಾಜ್ ಜೆ. ಅವರು ರಾತ್ರಿ ಪೆಟ್ರೋಲಿಂಗ್ ವೇಳೆ ದೊರೆತ ಖಚಿತ ಮಾಹಿತಿಯ ಮೇರೆಗೆ ದಾಳಿ ನಡೆಸಿದರು ಎಂದು ತಿಳಿಸಿದರು.

ಪೊಲೀಸರು ಪರಿಶೀಲನೆ ನಡೆಸಿದಾಗ ಒಲೂ-09-ಅಂ-3662 ಸಂಖ್ಯೆಯ ಲಾರಿಯಲ್ಲಿ ತಾಡಪತ್ರಿ ಹಾಗೂ ಎರೆಹುಳು ಗೊಬ್ಬರದ ಚೀಲಗಳ ಕೆಳಗೆ ಮದ್ಯದ ಪೆಟ್ಟಿಗೆಗಳನ್ನು ಅಡಗಿಸಿ ಸಾಗಾಟ ಮಾಡುತ್ತಿರುವುದು ಪತ್ತೆಯಾಯಿತು.

ಆರೋಪಿತರು ಗೋವಾದ ಪಣಜಿಯಿಂದ ಮಹಾರಾಷ್ಟ್ರಕ್ಕೆ ಅಕ್ರಮವಾಗಿ ಮದ್ಯ ಸಾಗಾಟ ಮಾಡುತ್ತಿದ್ದರು ಎಂದು ತನಿಖೆಯಲ್ಲಿ ತಿಳಿದುಬಂದಿದೆ. ಈ ಸಂಬಂಧ ಜಲನಗರ ಪೊಲೀಸ್ ಠಾಣೆಯಲ್ಲಿ ಕರ್ನಾಟಕ ಅಬಕಾರಿ ಕಾಯ್ದೆಯ ಕಲಂ 32, 34 ಹಾಗೂ 38(ಂ) ಅಡಿಯಲ್ಲಿ ಪ್ರಕರಣ ದಾಖಲಿಸಿ ನಾಲ್ವರನ್ನು ವಶಕ್ಕೆ ಪಡೆಯಲಾಗಿದೆ.

ಪ್ರಕರಣದ ಮುಂದಿನ ತನಿಖೆ ನಡೆಯುತ್ತಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ತಿಳಿಸಿದ್ದಾರೆ.

### ಬಂಧಿತ ಆರೋಪಿಗಳು

* ಶ್ರೀನಿವಾಸ ಕಾಸಪ್ಪ ಮೀಸಿ (25), ಗದಗ ಜಿಲ್ಲೆ
* ಹುಸೇನ್ಸಾಬ್ ರುಕ್ಮುದ್ದೀನ ಮುಲ್ಲಾ (35), ವಿಜಯಪುರ
* ಸಿದ್ದರಾಮ್ ಕಾಶೀನಾಥ ಡಾಲೆ (24), ಸೋಲಾಪುರ
* ಬಸವರಾಜ್ ಸತ್ಯೆಪ್ಪ ಭಜಂತ್ರಿ (31), ವಿಜಯಪುರ

# ಮಾದಕ ದ್ರವ್ಯಗಳ ಸೇವನೆ & ಸಂಗ್ರಹಣೆ ಕಾನೂನುಬಾಹಿರ : ಪಿಎಸ್ಐ

■ ಉದಯರಶ್ಮಿ ದಿನಪತ್ರಿಕೆ




ಕೊಲ್ಹಾರ: ತಾಲೂಕಿನ ಕೂಡಗಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಮಾದಕ ದ್ರವ್ಯ ವಿರೋಧಿ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಕೂಡಗಿ ಪೊಲೀಸ್ ಠಾಣೆಯ ಪಿಎಸ್‌ಐ ಯತೀಶ್ ಕೆ.ಎನ್. ಮಾತನಾಡಿ, ಯುವ ಸಮುದಾಯವು ಮಾದಕ ದ್ರವ್ಯಗಳ ವ್ಯಸನಕ್ಕೆ ಒಳಗಾಗುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು. ವ್ಯಸನಗಳಿಂದ ದೂರ ಉಳಿದು ಉತ್ತಮ ಸಾಮಾಜಿಕ ಜೀವನವನ್ನು ರೂಪಿಸಿಕೊಳ್ಳುವ ಮೂಲಕ ಸಮಾಜದ ಅಭಿವೃದ್ಧಿಗೆ ಯುವಜನತೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಮಾದಕ ದ್ರವ್ಯ ಸೇವನೆಯು ವ್ಯಕ್ತಿಯ ದೈಹಿಕ, ಮಾನಸಿಕ ಹಾಗೂ ಭಾವನಾತ್ಮಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಮಾದಕ ದ್ರವ್ಯಗಳ ಸೇವನೆ, ಮಾರಾಟ ಮತ್ತು ಸಂಗ್ರಹಣೆ ಕಾನೂನುಬಾಹಿರವಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗುವವರಿಗೆ ಕನಿಷ್ಠ 10 ವರ್ಷಗಳವರೆಗೆ ಜೈಲು ಶಿಕ್ಷೆಯ ಸಾಧ್ಯತೆ ಇದೆ ಎಂದು ಅವರು ತಿಳಿಸಿದರು. ರಾಜ್ಯವನ್ನು ಮಾದಕ ದ್ರವ್ಯ ಮುಕ್ತಗೊಳಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಠಿಣ ಕ್ರಮಗಳನ್ನು ಕೈಗೊಂಡಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಮಾದಕ ದ್ರವ್ಯ ಮಾರಾಟಗಾರರು ಯುವಜನರನ್ನು ಗುರಿಯಾಗಿಸಿಕೊಂಡಿದ್ದು, ಅನೇಕರು ತಿಳಿಯದೆ ಈ ಜಾಲದಲ್ಲಿ ಸಿಲುಕುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಯಾರಾದರೂ ಬೆದರಿಕೆ ಹಾಕಿದರೆ ಅಥವಾ ಬ್ಲಾಕ್‌ಮೇಲ್ ಮಾಡಿದರೆ ತಕ್ಷಣವೇ 112 ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಸಲಹೆ ನೀಡಿದರು. ಬಳಿಕ ಎಂ.ಎಸ್. ವೀರಗಡ್ಡಿಮಠ ಮಾತನಾಡಿ, ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ವಿವರವಾದ ಮಾಹಿತಿ ನೀಡಿದರು. ಯುವಜನತೆ ವ್ಯಸನಗಳಿಂದ ದೂರ ಉಳಿದು ಆರೋಗ್ಯಕರ ಜೀವನ ನಡೆಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ದ್ರವ್ಯ ಸೇವನೆ ವಿರೋಧಿ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಸಮಾಜದಲ್ಲಿ ನಶಾಮುಕ್ತ ವಾತಾವರಣ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪ ಪ್ರಾಂಶುಪಾಲ ಎಸ್.ಬಿ. ದೇಸಾಯಿ, ಎ.ಡಿ. ಸಾಲೋಡಗಿ, ಎಂ.ಎಸ್. ವೀರಗಡ್ಡಿಮಠ, ಸತೀಶ್ ಎಚ್.ಎಂ., ಎನ್.ಎಲ್. ಚಬನೂರ, ಉಪನ್ಯಾಸಕರಾದ ವಿ.ಜಿ. ಕಿವುಡಜಾಡರ, ಎಂ.ಎಚ್. ಪಾಟೀಲ, ಸಿಬ್ಬಂದಿ, ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಗ್ರಾಮೀಣರು ಜಾನಪದ ಸಾಹಿತ್ಯದ ವಾರಸುದಾರರು : ಆಲಮೇಲ ಶ್ರೀ

■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಜಾನಪದ ಸಾಹಿತ್ಯದ ಮಾಲಿಕರು ಗ್ರಾಮೀಣರು. ಸಮುದಾಯ ಅಂಕು ಡೊಂಕುಗಳನ್ನು ತಿದ್ದುವ ಸಾಮರ್ಥ್ಯ ಜಾನಪದ ಸಾಹಿತ್ಯಕ್ಕೆ ಇದೆ. ಸರಳ ಭಾಷೆಯಿಂದ ಜನಪದ ಸಾಹಿತ್ಯ ಕೂಡಿದೆ ಎಂದು ಆಲಮೇಲ ವಿರಕ್ತಮಠದ ಜಗದೇವ ಮಲ್ಲಿಬೊಮ್ಮಯ್ಯ ಸ್ವಾಮಿಜಿ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲೂಕಿನ ಇಂಗಳೇಶ್ವರ ಗ್ರಾಮದ ವಿರಕ್ತಮಠದ ಲಿಂ.ಸಿದ್ದಲಿಂಗ ಸ್ವಾಮೀಜಿಯವರ 92 ನೇ ಜಾತ್ರಾಮಹೋತ್ಸವದಂಗವಾಗಿ ವಚನ ಶಿಲಾಶಾಸನ ಮಂಟಪ ಆವರಣದಲ್ಲಿ ಜಿಲ್ಲಾ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಸೋಮವಾರ ಸಂಜೆ ಹಮ್ಮಿಕೊಂಡಿದ್ದ ಜಾನಪದ ಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮೆಲ್ಲರ ಹಿರಿಯರು ಜಾನಪದ ಸಂಸ್ಕೃತಿಯ ಮೌಲ್ಯಗಳನ್ನು ಪ್ರತಿಪಾದಿಸಿ ಅದರಂತೆ ನಡೆದು ಸುಂದರ ಸೌಹಾರ್ದತೆಯ ಮೂಲಕ ಜೀವನ ಕಟ್ಟಿಕೊಂಡು ಮಾದರಿಯಾಗಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಾನಪದ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ ಮಾತನಾಡಿ. ಗ್ರಾಮೀಣರು ಜಾನಪದ ಸಾಹಿತ್ಯ ಬೆಳೆಸಿ ಉಳಿಸಿದವರು. ಮೌಖಿಕ ಪರಂಪರೆಯಿಂದ ಬೆಳೆದುಬಂದ ಜನಸಾಮಾನ್ಯರ ಸಾಹಿತ್ಯವಾಗಿದೆ. ಜನಪದ ಗೀತೆಗಳು. ಕಥೆಗಳು. ಗಾದೆಗಳು. ಒಗಟುಗಳು ಪ್ರಖ್ಯಾತಗೊಂಡಿವೆ. ರಾಜ್ಯದಲ್ಲಿ ಜಾನಪದ ವಿಶ್ವವಿದ್ಯಾಲಯ ಸ್ಥಾಪನೆಯಾಗಿದ್ದು ಜನಪದರ ಆಸ್ತಿ ಎಂದರು.

ಸಾಹಿತಿ ಹಾಗೂ ಶಿಕ್ಷಕ ಅಶೋಕ ಹಂಚಲಿ ಅವರು ಜಾನಪದ ಸಾಹಿತ್ಯದಲ್ಲಿ ಜೀವನದ ಮೌಲ್ಯಗಳು ಕುರಿತು ಮಾತನಾಡಿ, ಜಾನಪದ ಸಾಹಿತ್ಯ ಸಮಾಜದ ಜೀವನಾಡಿ. ಜಾನಪದ ಹಾಡು ಮತ್ತು ಕಥೆಗಳು ಸಾಂಸ್ಕೃತಿಕ ಪರಂಪರೆಯ ಹಾಗೂ ನೈತಿಕ ಮೌಲ್ಯಗಳು ಹಾಗೂ ಬದುಕಿನ ಅನುಭವಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಮಾಧ್ಯಮವಾಗಿದೆ. ಅನೇಕ ಜಾನಪದ ಹಾಡುಗಳನ್ನು ಹಾಡಿ ರೈತರ ಪ್ರಾಮಾಣಿಕ ಜೀವನದ ಮೇಲೆ ಬೆಳಕನ್ನು ಚೆಲ್ಲಿದರು.




ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಾನಂದ ಮಂಗಾನವರ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಬಸವರಾಜ ಹಾರಿವಾಳ, ಜಾನಪದ ಸಾಹಿತ್ಯ ಪರಿಷತ್ತಿನ ತಾಲೂಕ ಅಧ್ಯಕ್ಷ ದೇವೇಂದ್ರ ಗೋನಾಳ, ಜಾನಪದ ಚಿಂತಕ ಬಸವರಾಜ ಸಾರವಾಡ ಜಾನಪದ ಹಾಡುಗಳನ್ನು ಹಾಡಿದರು.

ಕಾರ್ಯಕ್ರಮದಲ್ಲಿ ಬಾಬುರಾವ ಮಹಾರಾಜರು, ನಿಂಗಪ್ಪ ಬೊಮ್ಮನಹಳ್ಳಿ, ಈರಣ್ಣ ಬೆಕಿನಾಳ, ಸಿ,ಬಿ.ಬಿರಾದಾರ, ವಿವೇಕಾನಂದ ಕಲ್ಯಾಣಶೆಟ್ಟಿ, ಎಲ್.ಎಲ್.ಓಂಕಾರ, ಕಾಶೀನಾಥ ಅವಟಿ, ವಿಜಯಲಕ್ಷ್ಮೀ ಹಳಕಟ್ಟಿ ಇತರರು ಇದ್ದರು.

ಇದೇ ಸಂದರ್ಭದಲ್ಲಿ ಹೆಬ್ಬಾಳ ಗ್ರಾಮದ ರೈತರ ಹಂತಿ ಪದ ಹಾಡಿ ರಂಜಿಸಿದರು. ಶಶಿಕಲಾ ನಾಯ್ಕೋಡಿ ಜಾನಪದ ಗೀತಗಾಯನ ಮಾಡಿದರು. ರೇಖಾ ಕುಂಬಾರ ಪ್ರಾಥಿ9ಸಿದರು. ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಸಾಪ ತಾಲೂಕ ಅಧ್ಯಕ್ಷ ಶಿವಾನಂದ ಡೋಣೂರ ಸ್ವಾಗತಿಸಿದರು. ಮಮತಾ ಮುಳಸಾವಳಗಿ ನಿರೂಪಿಸಿದರು. ರೂಪಾ ರಜಪೂತ ವಂದಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR